ಸಂಪುಟ : ೮ ಸಂಚಿಕೆ : ೧೦೫ ಪುಟ : ೪ ಬೆಲೆ : ೩.೦೦ ಗುರುವಾರ ಮೇ ೨೫, ೨೦೨೩ Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 8 Issue : 105 Pages : 4 Price : 3.00 Thursday May 25, 2023 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಹಡಪದ ನೌಕರರ ಸಂಘ(ಶಿಯಾ) ಬೆಂಗಳೂರು, ಗದಗ ಜಿಲ್ಲಾ ಘಟಕದ ನೇತೃತ್ವದಲ್ಲಿ 2022-23ನೇ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಶೇ.75ರಷ್ಟು ಅಂಕಗಳಿಸಿದ ಹಡಪದ ಸಮಾಜದ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಲು ರಾಜ್ಯ ಹಡಪದ ನೌಕರರ ಸಂಘದ ಗದಗ ಜಿಲ್ಲಾ ಘಟಕ ನಿರ್ಧರಿಸಿದೆ.

ಈ ನಿಟ್ಟಿನಲ್ಲಿ ಶೇ.75ರಷ್ಟು ಅಂಕಗಳಿಸಿದ ಮಕ್ಕಳು ಅಂಕ ಪಟ್ಟಿ, ಆಧಾರ್ ಕಾರ್ಡ್, ಇತ್ತೀಚಿನ 2 ಭಾವಚಿತ್ರಗಳನ್ನು ವಿ ಬಿ ಕೊಣ್ಣೂರ, ಮನೆ ನಂ-ಎಲ್.ಐ.ಜಿ.-94, ರಾಧಾಕೃಷ್ಣ ನಗರ, ಮುಳಗುಂದ ರಸ್ತೆ, ಗದಗ. ಮೊ-9449570443 ಈ ವಿಳಾಸಕ್ಕೆ ಅಂಚೆ ಮೂಲಕ ಅಥವಾ ನೌಕರರ ಸಂಘದ ಜಿಲ್ಲಾಧ್ಯಕ್ಷರಿಗೆ ನೇರವಾಗಿ ಮೇ 30ರೊಳಗಾಗಿ ತಲುಪಿಸಲು ಕೋರಲಾಗಿದೆ.

ಹೆಚ್ಚಿನ ಮಾಹಿತಿಗೆ ಮೊ-9449570443 ಸಂಖ್ಯೆಗೆ ಸಂಪರ್ಕಿಸಬೇಕೆಂದು ಕರ್ನಾಟಕ ರಾಜ್ಯ ಹಡಪದ ನೌಕರರ ಸಂಘದ ಜಿಲ್ಲಾಧ್ಯಕ್ಷ ವಿ ಬಿ ಕೊಣ್ಣೂರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆಕಾಶವಾಣಿಯಲ್ಲಿ ಫೋನ್ ಇನ್ ನೇರ ಪ್ರಸಾರ ಕಾರ್ಯಕ್ರಮ ಜೂನ್ 1ಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವು 'ಗ್ರಾಹಕ ಸಂರಕ್ಷಣಾ ಕಾಯ್ದೆ 2019'ರ ಕುರಿತು ಗ್ರಾಹಕರಲ್ಲಿ ಜಾಗೃತಿ ಮೂಡಿಸುವ ಸಲುವಾಗಿ ಜೂನ್ 1ರಂದು ರಾತ್ರಿ 8ರಿಂದ 8.30 ಗಂಟೆಯವರೆಗೆ ಆಕಾಶವಾಣಿಯಲ್ಲಿ ಫೋನ್-ಇನ್ ನೇರ ಪ್ರಸಾರ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಗ್ರಾಹಕರು ಯಾವುದೇ ಪ್ರಶ್ನೆಗಳಿದ್ದಲ್ಲಿ ಮೇಲೆ ತಿಳಿಸಿರುವ ದಿನಾಂಕ ಹಾಗೂ ಸಮಯದಲ್ಲಿ ದೂರವಾಣಿ ಸಂಖ್ಯೆ 080-22370477/22370488/22370499ಕ್ಕೆ ಕರೆ ಮಾಡಿ ಮಾಹಿತಿಯನ್ನು ಪಡೆದುಕೊಳ್ಳಬಹುದಾಗಿದೆ. ಗ್ರಾಹಕರು ತಮ್ಮ ಪ್ರಶ್ನೆಗಳನ್ನು ಮಿಂಚಂಚೆ consumergrievances.queries@gmail.com ಮೂಲಕ ಮೇ 31ರೊಳಗೆ ಕಳುಹಿಸಬಹುದಾಗಿದೆ.

ಗ್ರಾಹಕರು ತಮ್ಮ ಸಮಸ್ಯೆ ನಿವಾರಿಸಿಕೊಳ್ಳಲು ಈ ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಪರಿಹಾರ ಪಡೆಯಲು ಇದೊಂದು ಸುವರ್ಣ ಅವಕಾಶವಾಗಿದೆ ಎಂದು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷ ಡಿ ವೈ ಬಸಾಪುರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೀನುಗಾರರ ಸಂಘದ ಪದಾಧಿಕಾರಿಗಳ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಗದಗ

ರಾಷ್ಟ್ರೀಯ ಮೀನುಗಾರರ ಸಂಘದ ಗದಗ ಜಿಲ್ಲಾ, ಗದಗ ತಾಲೂಕಾ ಘಟಕದ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಗಿದೆ.

ಅಧ್ಯಕ್ಷರಾಗಿ ಹರೀಶ ಬಾರಕೇರ, ಉಪಾಧ್ಯಕ್ಷರಾಗಿ ಅಮಿತ ಪೂಜಾರ ಹಾಗೂ ಸುಜಾತ ಗುಡಿಸಾಗರ, ಪ್ರಧಾನ ಕಾರ್ಯದರ್ಶಿಯಾಗಿ ರವಿಕುಮಾರ ಗುಡಿಸಾಗರ, ಸಹ ಕಾರ್ಯದರ್ಶಿಯಾಗಿ ಕೀರ್ತಿ ತಿರ್ಲಾಪೂರ, ಖಜಾಂಚಿಯಾಗಿ ಮಂಜುನಾಥ ಗುಡಿಸಾಗರ, ಗೌರವಾಧ್ಯಕ್ಷರಾಗಿ ಹುಚ್ಚಪ್ಪ ನಾಟೀಕರ, ಗಣೇಶ ಬಾರಕೇರ ಹಾಗೂ ಸುಜಾತ ಗಣೇಶ ಬಾರಕೇರ ಸದಸ್ಯರಾಗಿ ಆಯ್ಕೆಯಾಗಿದ್ದಾರೆ ಎಂದು ಸಂಘದ ಜಿಲ್ಲಾಧ್ಯಕ್ಷ ಸಂಗಮೇಶ ಹಾದಿಮನಿಯವರು ರಾಜ್ಯಾಧ್ಯಕ್ಷ ಮಂಜುನಾಥ ಸುಣಗಾರ ಅವರ ಆದೇಶದಂತೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ವಿಧಾನಸಭೆಯ ನೂತನ ಸ್ಪೀಕರ್ ಯು.ಟಿ.ಖಾದರ್ ಬುಧವಾರ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರನ್ನು ರಾಜಭವನದಲ್ಲಿ ಭೇಟಿ ಮಾಡಿದರು.ಇದೇ ಸಂದರ್ಭದಲ್ಲಿ ರಾಜ್ಯಪಾಲರು ಅಭಿನಂದಿಸಿದರು.

## ಪೋಷಕರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಲಕ್ಷ್ಮೇಶ್ವರದ ರೆಮನೆಂಟ್ ಆಂಗ್ಲ ಕಿರಿಯ ಪ್ರಾಥಮಿಕ ಶಾಲೆಯು ಪಟ್ಟಣದ ಹಿರೇಬಣದಿಂದ ಬಸ್ತಿಬಣಕ್ಕೆ ಇಲಾಖೆ ಅನುಮತಿ ಇಲ್ಲದೆ ಸ್ಥಳಾಂತರಿಸಿದ್ದು ನಿಯಮಬಾಹಿರವಾಗಿರುವ ಕಾರಣ 1 ರಿಂದ 5 ನೇ ತರಗತಿಗಳು ಅನಧಿಕೃತವಾಗಿವೆ.

ಪೋಷಕರು ತಮ್ಮ ಮಕ್ಕಳನ್ನು ಈ ಶಾಲೆಗೆ 1 ರಿಂದ 5 ನೇ ತರಗತಿಯವರೆಗೆ ದಾಖಲಾತಿ ಮಾಡಬಾರದು ಎಂದು ಶಿರಹಟ್ಟಿ ಕ್ಷೇತ್ರ ಶಿಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ರೋಣ ಶಾಸಕ ಜಿ ಎಸ್ ಪಾಟೀಲರಿಗೆ ಸಚಿವ ಸ್ಥಾನ ನೀಡುವಂತೆ ನಾಗರಾಜ ಗುದ್ನೆಪ್ಪನವರ ಆಗ್ರಹ

# ಸಚಿವ ಸ್ಥಾನ ನೀಡದಿದ್ದರೆ ಸಾಮೂಹಿಕ ರಾಜಿನಾಮೆ

■ವಿಜಯಸಾಕ್ಷಿ ಸುದ್ದಿ, ಗದಗ

ರೋಣ ಮತಕ್ಷೇತ್ರದ ಶಾಸಕ ಜಿ ಎಸ್ ಪಾಟೀಲರಿಗೆ ಈ ಬಾರಿಯೂ ಸಚಿವ ಸ್ಥಾನ ನೀಡದಿದ್ದರೆ ಕಾಂಗ್ರೆಸ್ ಪಕ್ಷಕ್ಕೆ ಹಾಗೂ ಗ್ರಾಮ ಪಂಚಾಯತ ಸದಸ್ಯತ್ವಕ್ಕೆ ಸಾಮೂಹಿಕ ರಾಜೀನಾಮೆ ನೀಡುತ್ತೇವೆ ಎಂದು ಚಿಕ್ಕಮಣ್ಣೂರ, ಹೊಸಳ್ಳಿ ಗ್ರಾಮ ಪಂಚಾಯತ ಸದಸ್ಯ ನಾಗಾರಜ್, ಬಿ ಎಸ್ ರಡ್ಡೇರ ಜಂಟಿಯಾಗಿ ಹೇಳಿಕೆ ನೀಡಿದರು.

ಬುಧವಾರ ನಗರದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಗದಗ ಜಿಲ್ಲೆಯಲ್ಲಿ ಹಲವು ಸಂದಿಗ್ಧ ಪರಿಸ್ಥಿತಿಗಳಲ್ಲಿಯೂ ಜಿ ಎಸ್ ಪಾಟೀಲರು ಪಕ್ಷ ಸಂಘಟನೆಗೆ ಶ್ರಮಿಸಿದ್ದಾರೆ. ಪ್ರಸ್ತುತ ಅವರಿಗೆ 75 ವರ್ಷವಾಗಿದೆ. ಇದು ಅವರ ಕೊನೆಯ ಚುನಾವಣೆ. ಹೀಗಾಗಿ ಜಿ ಎಸ್ ಪಾಟೀಲರಿಗೆ ಸಚಿವ ಸ್ಥಾನ ನೀಡುವ ಮೂಲಕ ಪಕ್ಷ ಅವರ ಶ್ರಮಕ್ಕೆ ಸೂಕ್ತ ಗೌರವ ನೀಡಬೇಕು. ಕಾಂಗ್ರೆಸ್ ಅಧಿಕಾರಕ್ಕೆ ಬಂದಾಗಲೆಲ್ಲಾ ರೋಣ ಕ್ಷೇತ್ರಕ್ಕೆ ಅನ್ಯಾಯವಾಗಿದೆ. ಕಾಂಗ್ರೆಸ್ ಹೈಕಮಾಂಡ ಈ ಬಾರಿ ಜಿ ಎಸ್ ಪಾಟೀಲರಿಗೆ ಸಚಿವ ಸ್ಥಾನ



ನೀಡಲೇಬೇಕು ಎಂದು ಒತ್ತಾಯಿಸಿದರು.

ಈ ಬಾರಿಯೂ ಜಿ ಎಸ್ ಪಾಟೀಲರಿಗೆ ಸಚಿವಸ್ಥಾನ ನೀಡದೇ ಇದ್ದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟಕ್ಕೆ ಮುಂದಾಗಲಿದ್ದೇವೆ. ಮುಂಬರುವ ಎಲ್ಲ ಚುನಾವಣೆಗಳಲ್ಲಿ ನಾವು ಪಕ್ಷದ ಪರವಾಗಿ ಯಾವುದೇ ಕೆಲಸ ಮಾಡದಿರಲು ನಿರ್ಧರಿಸಿದ್ದೇವೆ. ಅಲ್ಲದೆ, ರೋಣ ಮತಕ್ಷೇತ್ರದ ಇಟಗಿ, ಹೊಸಳ್ಳಿ, ಚಿಕ್ಕಮಣ್ಣೂರ, ಸೂಡಿ, ಹಾಳಕೇರಿ ಸೇರಿ ಕಾಂಗ್ರೆಸ್ ಬೆಂಬಲಿತ 15 ಗ್ರಾಮ ಪಂಚಾಯತಗಳ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಸಾಮೂಹಿಕ ರಾಜಿನಾಮೆ ನೀಡಲು ಮುಂದಾಗುತ್ತೇವೆ ಎಂದು ಚಿಕ್ಕಮಣ್ಣೂರು ಗ್ರಾ. ಪಂ ಸದಸ್ಯ ನಾಗರಾಜ ಗುದ್ನೆಪ್ಪನವರ ಎಚ್ಚರಿಸಿದರು.




ರೋಣ ಮತಕ್ಷೇತ್ರ ಅಭಿವೃದ್ಧಿಯ ದೃಷ್ಟಿಯಿಂದ ಜಿಲ್ಲೆಯಲ್ಲಿ ಇನ್ನೂ ಹಿಂದುಳಿದಿದೆ. ವೈದ್ಯಕೀಯ, ಶೈಕ್ಷಣಿಕ ಕ್ಷೇತ್ರಗಳಲ್ಲಿ, ನೀರು, ರಸ್ತೆ ಇತ್ಯಾದಿ ಮೂಲಭೂತ ಸೌಲಭ್ಯಗಳಲ್ಲಿ ನಿರೀಕ್ಷೆಯಂತೆ ಗುರಿ ತಲುಪಲು ಇಂದಿಗೂ ಸಾಧ್ಯವಾಗಿಲ್ಲ. ಕ್ಷೇತ್ರದ ಅಭಿವೃದ್ಧಿಯ ದೃಷ್ಟಿಯಿಂದಾದರೂ ಈ ಬಾರಿ ಕ್ಷೇತ್ರದ ಶಾಸಕ ಜಿ ಎಸ್ ಪಾಟೀಲರಿಗೆ ಸಚಿವ ಸ್ಥಾನ ನೀಡಬೇಕೆಂದು ಗ್ರಾ.ಪಂ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರ ವತಿಯಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಹಾಗೂ ಪಕ್ಷದ ವರಿಷ್ಠರಾದ ಮಲ್ಲಿಕಾರ್ಜುನ ಖರ್ಗೆಯವರಲ್ಲಿ ಆಗ್ರಹಿಸುತ್ತಿದ್ದೇವೆ.

### ನೂತನ ಸ್ಪೀಕರ್ ಯು. ಟಿ. ಖಾದರ್ ಅವರನ್ನು ಅಭಿನಂದಿಸಿ ಮಾತನಾಡಿದ ಸಿಎಂ ಸಿದ್ದರಾಮಯ್ಯ

# 'ಸದನದ ಘನತೆಯನ್ನು ಎತ್ತಿಹಿಡಿಯುವ ಜವಾಬ್ದಾರಿ ಸಭಾಧ್ಯಕ್ಷರ ಮೇಲಿದೆ'

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ವಿಧಾನಸಭೆಯಲ್ಲಿ ಸದನದ ಘನತೆ, ಗಾಂಭೀರ್ಯ, ಗೌರವವನ್ನು ಎತ್ತಿಹಿಡಿಯುವ ಜವಾಬ್ದಾರಿ ಸಭಾಧ್ಯಕ್ಷರ ಮೇಲಿದೆ. ನೂತನ ಸಭಾಧ್ಯಕ್ಷರಾದ ಯು.ಟಿ. ಖಾದರ್ ಆ ನಿಟ್ಟಿನಲ್ಲಿ ಕಾರ್ಯನಿರ್ವಹಿಸಲಿ ಎಂದು ಮುಖ್ಯ ಮಂತ್ರಿ ಸಿದ್ದರಾಮಯ್ಯ ಹೇಳಿದರು.

ಅವರು ಬುಧವಾರ ವಿಧಾನಸಭೆಯ ಅಧಿವೇಶನದಲ್ಲಿ ನೂತನ ಸಭಾಧ್ಯಕ್ಷರಾಗಿ ಆಯ್ಕೆಯಾದ ಯು.ಟಿ ಖಾದರ್ ಅವರನ್ನು ಅಭಿನಂದಿಸಿ ಮಾತನಾಡಿದರು.

ಆರೋಗ್ಯಪೂರ್ಣ ಹಾಗೂ ರಾಜ್ಯದ ಹಿತದೃಷ್ಟಿಯಿಂದ ಕೂಡಿದ ಚರ್ಚೆಗಳಾಗುವ ಮೇಲ್ಪಂಕ್ತಿಯನ್ನು ಎತ್ತಿಹಿಡಿಯುವ ಜವಾಬ್ದಾರಿ ಸಭಾಧ್ಯಕ್ಷರ ಮೇಲಿದೆ. ಖಾದರ್ ಅವರ ಮುಂದಾಳತ್ವದಲ್ಲಿ ಸದನದ ಚರ್ಚೆ ಮೇಲ್ಮಟ್ಟಕ್ಕೇರಲಿ ಎಂದು ಆಶಿಸುತ್ತೇನೆ ಎಂದು ಅವರು ಆಶಯ ವ್ಯಕ್ತಪಡಿಸಿದರು.

ಖಾದರ್ ಅವರು ಸಭಾಧ್ಯಕ್ಷರ ಜವಾಬ್ದಾರಿಯನ್ನು ಉತ್ತಮವಾಗಿ ನಿರ್ವಹಿಸುವ ನಂಬಿಕೆ ವಿಶ್ವಾಸವಿದೆ. ಅವರು ಬಹಳ ತಾಳ್ಮೆ ಇರುವ ವ್ಯಕ್ತಿ. ಅದು ಈ ಹುದ್ದೆಗೆ ಅಗತ್ಯವಾದ ಗುಣವಿದೆ. ಸದನದಲ್ಲಿ ರಾಜ್ಯದ ಅಭಿವೃದ್ಧಿಯ ದೃಷ್ಟಿಯಿಂದ ಚರ್ಚೆಗಳಾಗಲಿ. ಹೊಸದಾಗಿ ಆರಿಸಿ ಬಂದ ಸದಸ್ಯರಿಗೆ ಅಭಿನಂದನೆಗಳು. ಸರ್ಕಾರವಾಗಿ ತಮಗೆ ನಾವು ಎಲ್ಲ ರೀತಿಯ ಸಹಕಾರವನ್ನು ನೀಡುತ್ತೇವೆ ಎಂದರು. ▶▶3ನೇ ಪುಟಕ್ಕೆ



**ಕಾನೂನು, ಸುವ್ಯವಸ್ಥೆ ರಾಜ್ಯದ ಬೆಳವಣಿಗೆಗೆ ಪೂರಕ**

ವಿಧಾನಸಭೆಗೆ ಬಂದ ಮೇಲೆ ರಾಜ್ಯದ ಅಭಿವೃದ್ಧಿ, ಜನರ ರಕ್ಷಣೆ, ಕಾನೂನು ಸುವ್ಯವಸ್ಥೆ ಇರಬೇಕು. ಕಾನೂನು ಸುವ್ಯವಸ್ಥೆ ಇಲ್ಲದಿದ್ದರೆ ಬಂಡವಾಳ ಹೂಡಿಕೆಯಾಗುವುದಿಲ್ಲ. ಬಂಡವಾಳ ಹೂಡಿಕೆಯಾಗದಿದ್ದರೆ, ಉದ್ಯೋಗ ಸೃಷ್ಟಿಯಾಗುವುದಿಲ್ಲ. ಉದ್ಯೋಗ ಸೃಷ್ಟಿಯಾಗದಿದ್ದರೆ ನಿರುದ್ಯೋಗದ ಸಮಸ್ಯೆ ಬಗೆಹರಿಸಲು ಆಗುವುದಿಲ್ಲ. ರಾಜ್ಯದ ಅಭಿವೃದ್ಧಿ, ಜಿಡಿಪಿ ಬೆಳವಣಿಗೆಯೂ ಆಗುವುದಿಲ್ಲ. ಆದ್ದರಿಂದ ಕಾನೂನು ಸುವ್ಯವಸ್ಥೆ ಹಾಗೂ ರಾಜ್ಯದ ಬೆಳವಣಿಗೆ ಒಂದಕ್ಕೊಂದು ಪೂರಕವಾಗಿದೆ ಎಂದು ಮುಖ್ಯಮಂತ್ರಿಗಳು ತಮ್ಮ ಭಾಷಣದಲ್ಲಿ ಹೇಳಿದರು.

ರಾಜಕಾರಣದ ಕುಟುಂಬದಿಂದ ಬಂದಿರುವ ಖಾದರ್ ತಮ್ಮ ತಂದೆಯ ನಿಧನದ ನಂತರ ಉಳ್ಳಾಲ ಕ್ಷೇತ್ರದ ಶಾಸಕರಾಗಿ ಆಯ್ಕೆಯಾದರು. ಅತ್ಯಂತ ಉತ್ಸಾಹಿ, ಸಕ್ರಿಯ ರಾಜಕಾರಣಿಯಾದ ಖಾದರ್ ಶಾಸಕರಾಗಿ ಹಾಗೂ ಸಚಿವರಾಗಿ ಕಾರ್ಯನಿರ್ವಹಿಸಿದ್ದು, 2018ರಲ್ಲಿ ಅತಿ ಹೆಚ್ಚು ಪ್ರಶ್ನೆಗಳನ್ನು ಕೇಳಿದ್ದಕ್ಕಾಗಿ "ಸದನವೀರ" ಪ್ರಶಸ್ತಿಯೂ ದೊರೆತಿತ್ತು.

ಯು.ಟಿ.ಖಾದರ್ ಮಾದರಿ ಶಾಸಕರಾಗಿ ಕೆಲಸ ಮಾಡಿದ್ದು, ವಿರೋಧ ಪಕ್ಷದಲ್ಲಿದ್ದ ಸಂದರ್ಭದಲ್ಲಿ ವಿರೋಧಪಕ್ಷದ ಉಪನಾಯಕರಾಗಿ ಪರಿಣಾಮಕಾರಿಯಾಗಿ, ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಿದ್ದಾರೆ. ಅವರು ಜಾತ್ಯಾತೀತ ಮನೋಭಾವ ಉಳ್ಳವರು ಕೂಡ ಎಂದು ಸಿಎಂ ಹೇಳಿದರು.

## ಪರಿಸರ ಸಂರಕ್ಷಣೆ ನಮ್ಮೆಲ್ಲರ ಕರ್ತವ್ಯ: ಶೋಭಾ ಪೋಳ

■ವಿಜಯಸಾಕ್ಷಿ ಸುದ್ದಿ, ಗದಗ

ಪರಿಸರ ಸಂರಕ್ಷಣೆ ನಮ್ಮೆಲ್ಲರ ಕರ್ತವ್ಯವಾಗಿದೆ. ಪರಿಸರವನ್ನು, ಗಿಡಮರಗಳನ್ನು ನಾವು ಪ್ರೀತಿಯಿಂದ ಪೋಷಿಸಿ ಬೆಳೆಸಬೇಕು ಎಂದು ಪರಿಸರ ಅಧಿಕಾರಿ ಶೋಭಾ ಪೋಳ ತಿಳಿಸಿದರು.

ಗದಗ ಜಿಲ್ಲಾಡಳಿತ, ಪ್ರಾದೇಶಿಕ ಕಛೇರಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಹಾಗೂ ಮೆ. ಆರ್‌ಎನ್‌ಎಸ್ ಮೋಟರ್ಸ್, ಗದಗ ಇವರುಗಳ ಸಂಯುಕ್ತ ಆಶ್ರಯದಲ್ಲಿ ಮಂಗಳವಾರ ನಗರದ



ಆರ್‌ಎನ್‌ಎಸ್ ಮೋಟರ್ಸನಲ್ಲಿ ಅಧಿಕಾರಿಗಳಿಗೆ ಹಾಗೂ ಸಿಬ್ಬಂದಿಗಳಿಗೆ ಹಮ್ಮಿಕೊಳ್ಳಲಾಗಿದ್ದ ಪರಿಸರಕ್ಕೆ ಪೂರಕವಾದ ಜೀವನ ಶೈಲಿಗೆ ಸಾಮೂಹಿಕ ಪ್ರೋತ್ಸಾಹ' ಎಂಬ ವಿಷಯದ ಕುರಿತು ತಿಳುವಳಿಕೆ ಕಾರ್ಯಕ್ರಮದಲ್ಲಿ ಮಾತನಾಡಿದರು. ▶▶3 ನೇ ಪುಟಕ್ಕೆ

### ತಾಲೂಕು ಮಟ್ಟದ ವಿಪತ್ತು ನಿರ್ವಹಣಾ ಸಭೆಯಲ್ಲಿ ತಹಸೀಲ್ದಾರ ಕೆ. ಆನಂದಶೀಲ ಸಲಹೆ

## 'ಗ್ರಾಮಗಳಲ್ಲಿ ಸ್ವಚ್ಛತೆಗೆ ಆದ್ಯತೆ ನೀಡಿ'

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮುಂಗಾರು ಪೂರ್ವ ಮಳೆಗೆ ತಾಲೂಕಿನಲ್ಲಿ ಯಾವುದೇ ಅಹಿತಕರ ಘಟನೆ, ಜೀವಹಾನಿಯಾಗದಂತೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು ಮತ್ತು ಪಟ್ಟಣ, ಗ್ರಾಮಗಳಲ್ಲಿ ಸ್ವಚ್ಛತೆಗೆ ಆದ್ಯತೆ ನೀಡಬೇಕು ಎಂದು ತಹಸೀಲ್ದಾರ ಕೆ. ಆನಂದಶೀಲ ತಿಳಿಸಿದರು.

ಅವರು ಬುಧವಾರ ತಹಸೀಲ್ದಾರ ಕಾರ್ಯಾಲಯದಲ್ಲಿ ಕರೆದ ತಾಲೂಕು ಮಟ್ಟದ ಅಧಿಕಾರಿಗಳನ್ನೊಳಗೊಂಡ ತಾಲೂಕು ಮಟ್ಟದ ವಿಪತ್ತು ನಿರ್ವಹಣಾ



ಸಭೆಯಲ್ಲಿ ಮಾತನಾಡಿದರು.

ಮುಂಗಾರು ಮಳೆಗಾಲದಲ್ಲಿ ಎದುರಾಗಬಹುದಾದ ಸಮಸ್ಯೆಗಳ ನಿರ್ವಹಣೆಗೆ ಸೂಕ್ತ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು. ಯಾವುದೇ ರೀತಿಯ ವಿದ್ಯುತ್ ದುರ್ಘಟನೆ, ಮರ ಬೀಳುವುದು ಸೇರಿ ಪ್ರಾಣಹಾನಿ, ಸಾರ್ವಜನಿಕರಿಗೆ ತೊಂದರೆಯಾಗಬಾರದು.

ಪಟ್ಟಣ ಮತು ▶▶3ನೇ ಪುಟಕ್ಕೆ

### 32 ದಿನ ಸತತ ಕೆಲಸ ನೀಡಿದ್ದಕ್ಕಾಗಿ ಖುಷಿಯಾದ ಗ್ರಾಮಸ್ಥರು

# ನರೇಗಾ ಕಾರ್ಮಿಕರಿಂದ ಪಿಡಿಓಗೆ ಸನ್ಮಾನ

■ವಿಜಯಸಾಕ್ಷಿ ಸುದ್ದಿ, ರೋಣ

ನಿರಂತರವಾಗಿ 32 ದಿನಗಳವರೆಗೆ ನರೇಗಾ ಯೋಜನೆಯಡಿ ಬದು ನಿರ್ಮಾಣದ ಕೆಲಸ ನೀಡಿದ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಶಿಲ್ಪಾ ಕವಲೂರ ಅವರನ್ನು ನರೇಗಾ ಕಾರ್ಮಿಕರು ಬುಧವಾರ ಸನ್ಮಾನಿಸಿದರು.

ರೋಣ ತಾಲೂಕಿನ ಕುರಡಗಿ ಗ್ರಾಮ ಪಂಚಾಯತ ವ್ಯಾಪ್ತಿಯ ಯರೇಬೇಲೇರಿ ಗ್ರಾಮದ ಹೊರವಲಯದ ಜಮೀನಿನಲ್ಲಿ ಈ ಸನ್ಮಾನ ಕಾರ್ಯಕ್ರಮ ನಡೆಯಿತು.

ಕುರುಡಗಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಯರೇಬೇಲೇರಿ ಗ್ರಾಮದಲ್ಲಿ ನರೇಗಾ ಯೋಜನೆಯು ಆರಂಭವಾದಾಗಿನಿಂದ ಬಂದಾಗಿನಿಂದ ಇಲ್ಲಿಯವರೆಗೂ ಇಷ್ಟು ಗರಿಷ್ಠ ಪ್ರಮಾಣದಲ್ಲಿ ಕೂಲಿ ಕೆಲಸ ಯಾರೂ ಕೊಟ್ಟಿರಲಿಲ್ಲ.



ಹೊಸದಾಗಿ ಪಿಡಿಓ ಆಗಿ ಬಂದ ಶಿಲ್ಪಾ ಕವಲೂರ ಇಷ್ಟು ಪ್ರಮಾಣದಲ್ಲಿ ಕೆಲಸ ಕೊಟ್ಟು ನಮಗೆ ಆರ್ಥಿಕವಾಗಿ ಸದೃಢ ಆಗುವ ಹಾಗೆ ಮಾಡಿದ್ದಾರೆ ಎಂದು ಗ್ರಾಮಸ್ಥರು ಹೇಳುತ್ತಾರೆ.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಅಧ್ಯಕ್ಷರು, ಉಪಾಧ್ಯಕ್ಷರು, ಃಈಖಿ ಪ್ರಕಾಶ ಅಂಬಕ್ಕಿ, ಗ್ರಾಮ ಕಾಯಕ ಮಿತ್ರರು, ಪಂಚಾಯತ ಸಿಬ್ಬಂದಿಗಳು ಸೇರಿದಂತೆ ಕೂಲಿ ಕಾರ್ಮಿಕರು ಹಾಜರಿದ್ದರು.

ಮೊದಲು ಮುಂಡರಗಿ ತಾಲೂಕಿನಲ್ಲಿ ಪಿಡಿಓ ಆಗಿ ಕೆಲಸ ನಿರ್ವಹಣೆ ಮಾಡುತ್ತಿದ್ದೆ. ಇತ್ತೀಚೆಗೆ ರೋಣ ತಾಲೂಕಿನ ಕುರುಡಗಿ ಗ್ರಾಪಂನಲ್ಲಿ ಕೆಲಸ ನಿರ್ವಹಣೆ ಮಾಡುತ್ತಿದ್ದೇನೆ. ನಾನು ಯರೇಬೆಲೇರಿ ಗ್ರಾಮದಲ್ಲಿ ನರೇಗಾ ಯೋಜನೆಯಡಿ ನನ್ನ ಕರ್ತವ್ಯ ಮಾಡಿದ್ದೇನಷ್ಟೇ. ಆದರೆ ಇಂದು ಜನರು ನನ್ನ ಕೆಲಸವನ್ನು ಗುರುತಿಸಿ ಪ್ರೋತ್ಸಾಹ ನೀಡುವ ಜೊತೆಗೆ ಪ್ರಶಂಸೆ ವ್ಯಕ್ತಪಡಿಸಿದ ರೀತಿ ನಿಜಕ್ಕೂ ನನಗೆ ಇನ್ನೂ ಜವಾಬ್ದಾರಿಯನ್ನು ಹೆಚ್ಚಿಸಿದೆ.

**-ಶಿಲ್ಪಾ ಕವಲೂರ,** ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕುರುಡಗಿ

ನಮಗೆ ಹೊಸದಾಗಿ ಬಂದ ಪಿಡಿಓ 32 ದಿನ ಕೆಲಸ ಕೊಟ್ಟಾರ. ಅವರಿಗೆ ಪುಣ್ಯ ಬರ್ಲಿ. ನಮಗೆ ಮಳೆ ಆಗು ವರೆಗೂ ಇನ್ನೂ ಕೆಲಸ ಕೊಡ್ತಿನಿ. ಅಂದಾರ ಮಳೆ ಇರಲಾರದಾಗ ನರೇಗಾ ಯೋಜನೆಯಡಿ ನಾಲ್ಕು ದುಡ್ಡು ಕೈಯಾಗು ಬರ್ತಾವು. ಅದರಿಂದ ಮನೆತನ ನಡೀತೈತಿ. ಇದುವರೆಗೂ ನಮ್ಮ ಗ್ರಾಮದಲ್ಲಿ ಇಷ್ಟು ಕೆಲಸ ಯಾರು ಕೊಟ್ಟಿರಲಿಲ್ಲ.

**– ಆನಂದ ಬಸಪ್ಪ ಕುಂಬಾರ,** ನರೇಗಾ ಕೂಲಿ ಕಾರ್ಮಿಕ

## ಸಾಕ್ಷಿ ಸುಭಾಷಿತ

ವ್ಯಕ್ತಿಯು ಗಳಿಸುವ ಸಂಪತ್ತಿಗಿಂತ ಉನ್ನತವಾದದ್ದು ಆತನು ಬೆಳೆಸುವ ವರ್ಚಸ್ಸು.

–ಏರ್ಲೆಂಡ್ ಗಾದೆ

## ಸಂಪಾದಕೀಯ

### ಸಚಿವ ಸ್ಥಾನಕ್ಕೆ ಹೊಸ ಮಾನದಂಡ; ಕಾಂಗ್ರೆಸ್ ಶಾಸಕರಲ್ಲಿ ಹೆಚ್ಚಿದ ಆತಂಕ

ಮುಖ್ಯಮಂತ್ರಿ ಆಗಿ ಸಿದ್ದರಾಮಯ್ಯ ಪ್ರಮಾಣವಚನ ಸ್ವೀಕರಿಸಿದ ನಂತರ ಮೊದಲ ಅಧಿವೇಶನವನ್ನು ಯಶಸ್ವಿಯಾಗಿ ಮುಗಿಸಿದ್ದಾರೆ. ಸ್ಪೀಕರ್ ಆಯ್ಕೆಯ ನಂತರ ಪ್ರಮಾಣವಚನ ಸ್ವೀಕರಿಸಿರುವ ಸಚಿವರಿಗೆ ಖಾತೆ ಹಂಚಿಕೆ ಜೊತೆಗೆ ಸಚಿವ ಸಂಪುಟವನ್ನು ವಿಸ್ತರಣೆ ಮಾಡುವ ಪ್ರಕ್ರಿಯೆಗೆ ಚಾಲನೆ ಕೊಟ್ಟಿದ್ದಾರೆ.

ವಿಧಾನಸಭೆ ಚುನಾವಣೆಯಲ್ಲಿ ಸ್ಪಷ್ಟ ಬಹುಮತದೊಂದಿಗೆ ಗೆದ್ದು ಬೀಗುತ್ತಿರುವ ಕಾಂಗ್ರೆಸ್ಸಿಗೆ, ಸಚಿವ ಸಂಪುಟ ವಿಸ್ತರಣೆ ಬಹುದೊಡ್ಡ ಸವಾಲಾಗಿಯೇ ಪರಿಣಮಿಸಿದೆ. ಮತ ಎಣಿಕೆ ಮುಗಿಯುತಿದ್ದಂತೆ ಬೆಂಗಳೂರಿನತ್ತ ದೌಡಾಯಿಸಿದ ಕಾಂಗ್ರೆಸ್ ಶಾಸಕರು, ಈವರೆಗೆ ಕ್ಷೇತ್ರದ ತಿರುಗಿಯೂ ನೋಡಿಲ್ಲ.

ಬೆಂಗಳೂರು ದೆಹಲಿಗೆ ತೆರಳಿ ಸಚಿವ ಸ್ಥಾನಕ್ಕಾಗಿ ತಮ್ಮದೇ ಆದ ರೀತಿಯಲ್ಲಿ ಲಾಬಿ ಶುರು ಇಟ್ಟುಕೊಂಡಿದ್ದಾರೆ. ಹಲವಾರು ಶಾಸಕರು ತಮ್ಮ ಹಿರಿತನವನ್ನು ಆಧರಿಸಿ ಸಚಿವ ಸ್ಥಾನಕ್ಕಾಗಿ ಪಟ್ಟು ಹಿಡಿದು ಕುಳಿತಿದ್ದಾರೆ. ಸದ್ಯ ಸಚಿವ ಸಂಪುಟ ವಿಸ್ತರಣೆ ಚರ್ಚೆ ಬೆಂಗಳೂರಿನಿಂದ ದೆಹಲಿಗೆ ಶಿಫ್ಟ್ ಆಗಿದೆ. ಅದರ ಜೊತೆಗೆ ಸಚಿವರಾಗುವ ಮಾನದಂಡವು ಕೂಡ ಬದಲಾಗಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ಅವರಿಗೆ ತಮ್ಮ ಬೆಂಬಲಿಗರಿಗೆ ಸಚಿವ ಸ್ಥಾನ ಕೊಡಿಸುವ ಇರಾದೆ ಹೊಂದಿದ್ದರೆ, ಕಾಂಗ್ರೆಸ್ ಹೈಕಮಾಂಡ್ 2024ರ ಲೋಕಸಭಾ ಚುನಾವಣೆ ಆದರಿಸಿ ಮಂತ್ರಿ ಸ್ಥಾನ ಕೊಡುವ ಪ್ಲಾನ್ ರೂಪಿಸಿದೆ.

2024ರ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳನ್ನು ಗೆಲ್ಲಿಸಿಕೊಂಡು ಬರುವ ಸಾಮರ್ಥ್ಯ ಇರುವ ನಾಯಕರಿಗೆ ಸಚಿವ ಸ್ಥಾನ ಕೊಡುವ ಬಗ್ಗೆ ಚಿಂತನೆ ನಡೆಸಿದೆ. ಕಾಂಗ್ರೆಸ್ ಹೈಕಮಾಂಡ್ ನ ಈ ಚಿಂತನೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಡಿಕೆ ಶಿವಕುಮಾರ್ ಅವರಿಗೂ ಅಘಾತ ತಂದೊಡ್ಡಿದೆ. ರಾಜ್ಯದಲ್ಲಿ ಅನೇಕ ಕಾಂಗ್ರೆಸ್ ಶಾಸಕರು ಕನಿಷ್ಠ ಎರಡು ಮೂರು ಬಾರಿ ವಿಧಾನಸಭೆ ಪ್ರವೇಶ ಮಾಡಿದವರಾಗಿದ್ದಾರೆ.

ಪ್ರತಿ ಚುನಾವಣೆಯಲ್ಲಿ ತಮ್ಮ ಗೆಲುವಿಗೆ ಶಕ್ತಿ ಮೀರಿ ಪ್ರಯತ್ನಿಸುವ ಕೆಲ ಶಾಸಕರು ಅಕ್ಕ ಪಕ್ಕದ ಕ್ಷೇತ್ರದ ಅಭ್ಯರ್ಥಿಗಳತ್ತ ತಿರುಗಿಯೂ ನೋಡುವುದಿಲ್ಲ. ತಾವು ಗೆಲ್ಲುವ ಜೊತೆಗೆ ತಮ್ಮವರನ್ನ ಗೆಲ್ಲಿಸುವ ಸಾಮರ್ಥ್ಯ ಅನೇಕ ಶಾಸಕರಿಗೆ ಇದೆ. ಆದರೂ ಅದನ್ನು ಬಳಕೆ ಮಾಡುವುದಿಲ್ಲ. ಅಂತಹ ಶಾಸಕರಿಗೆ ಮಂತ್ರಿಗಿರಿ ಕೊಡದೆ, ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಗೆಲುವಿಗೆ ಕಾರಣರಾಗುವವರಿಗೆ ಮಣೆ ಹಾಕಲು ಸಿದ್ಧತೆಗಳು ನಡೆದಿವೆ.

ಕಾಂಗ್ರೆಸ್ಸಿನ ಈ ಚಿಂತನೆ ಆ ಪಕ್ಷಕ್ಕೆ ಸಾಕಷ್ಟು ಅನುಕೂಲ ಕಲ್ಪಿಸಲಿದೆ. ತಾವು ಗೆಲ್ಲುವ ಜೊತೆಗೆ ತಮ್ಮವರನ್ನು ಗೆಲ್ಲಿಸುವ ಅನಿವಾರ್ಯತೆ ಸೃಷ್ಟಿಯಾದಾಗಲೆ ಪಕ್ಷಕ್ಕೆ ಒಂದಷ್ಟು ಬಲ ಬರುತ್ತದೆ.

ಅದರಲ್ಲೂ ಲೋಕಸಭೆಯಲ್ಲಿ ಸೋತು ಸಣ್ಣವಾಗಿರುವ ಕಾಂಗ್ರೆಸ್, ಈ ಬಾರಿ ಶತಾಯುಗತಾಯ ಹೆಚ್ಚಿನ ಸ್ಥಾನಗಳನ್ನ ಗೆಲ್ಲುವ ಯೋಜನೆ ಹಾಕಿಕೊಂಡಿದೆ. ದಕ್ಷಿಣ ಭಾರತದಲ್ಲಿ ಕಾಂಗ್ರೆಸ್ಸಿನ ಬೇರುಗಳು ಗಟ್ಟಿಯಾಗಿರುವ ಕರ್ನಾಟಕದಿಂದಲೇ ಹೊಸ ಪ್ರಯೋಗ ಆರಂಭವಾದರೆ ಅಚ್ಚರಿಪಡಬೇಕಿಲ್ಲ.

ನಮ್ಮ ಮನದಾಸೆಯನ್ನೇ ನಮ್ಮ ಮಕ್ಕಳ ಮೇಲೆ ಹೇರುವ ಬಯಕೆ ದೂರವಾಗಿಸೋಣ

# ‘ಮಕ್ಕಳ ಕನಸಿನ ಹಕ್ಕಿಗೆ ರೆಕ್ಕೆಯಾಗೋಣ’



ನಮ್ಮ ಮಗ ಡಾಕ್ಟರ್ ಆಗ್ಬೇಕು, ಇಂಜಿನಿಯರ್ ಆಗ್ಬೇಕು, ಲಾಯರ್ ಆಗ್ಬೇಕು, ಐಎಎಸ್, ಕೆಎಎಸ್‌ನಂತಹ ದೊಡ್ಡ ದೊಡ್ಡ ಹುದ್ದೆಗಳನ್ನೇರಬೇಕು, ತಿಂಗಳಿಗೆ ಲಕ್ಷ ಲಕ್ಷ ರೂಪಾಯಿಗಳ ಸಂಬಳ ಎಣಿಸಬೇಕು. ನೆರಳಲ್ಲಿ ಕುಳಿತು ಕೆಲಸ ಮಾಡಬೇಕು. ಏನೇ ಆಗಲಿ ನಮ್ಮ ಮಕ್ಕಳು ನಮ್ಮಂತೆ ಆಗದಿದ್ದರೆ ಸಾಕು ಎನ್ನುವ ಅವರ ಮಾತನ್ನು ಕೇಳಿ ಆಶ್ಚರ್ಯವಾಯಿತು. ಯಾಕೆಂದರೆ ರೈತಾಪಿ ಕುಟುಂಬದಿಂದ ಬಂದವರಾದ ಅವರು ತಮ್ಮ ಮಕ್ಕಳು ತಮ್ಮಂತೆ ರೈತರಾಗಲಿ, ಶ್ರೇಷ್ಠ ಕೃಷಿಕನಾಗಲಿ ಎಂಬ ಇಂಗಿತವನ್ನು ವ್ಯಕ್ತಪಡಿಸಲೇ ಇಲ್ಲ. ಡಾಕ್ಟರ್ ಮಗ ಡಾಕ್ಟರ್ ಆಗಬೇಕೆಂದು, ಮಾಸ್ತರನ ಮಕ್ಕಳು ಮಾಸ್ತರ ಆಗಬೇಕೆಂದು ರೂಲ್ಸ್ ಇಲ್ಲ, ಹಾಗೇ ರೈತನ ಮಗ ರೈತನೇ ಆಗಬೇಕು ಅಂತೇನೂ ಇಲ್ಲ. ಅವರವರ ಆಸೆ, ಕನಸು, ಆಸಕ್ತಿ, ಅಭಿರುಚಿ ಹವ್ಯಾಸಗಳು ಏನಿರುತ್ತವೆಯೋ ಅದರಂತೆಯೇ ಆದರೆ ಒಳ್ಳೆಯದಲ್ಲವೇ?

ನಿನ್ನೆ ಮಧ್ಯಾಹ್ನ ರೈಲಿನಲ್ಲಿ ಪ್ರಯಾಣಿಸುತ್ತಿರುವಾಗ ಮುಂದಿನ ಸ್ಟೇಷನ್‌ನಲ್ಲಿ ಇಬ್ಬರು ಪ್ರಯಾಣಿಕರು ನನ್ನದೇ ಬೋಗಿಯಲ್ಲಿ, ಪಕ್ಕದ ಸೀಟುಗಳಲ್ಲಿ ಬಂದು ಕುಳಿತರು. ಅವರು ಕೂಡ ಗದುಗಿಗೆ ಪ್ರಯಾಣ ಬೆಳೆಸುತ್ತಿದ್ದಾರೆಂದು ಅವರ ಮಾತಿನಿಂದಲೇ ಗೊತ್ತಾಯ್ತು. ಮಾರ್ಗದುದ್ದಕ್ಕೂ ಅವರು ಮಾತನಾಡುತ್ತಿದ್ದುದು ಒಂದೇ ವಿಷಯದ ಬಗ್ಗೆ. ಅದೇನೆಂದರೆ, ಮೊನ್ನೆ ತಾನೇ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಮುಗಿದು ಫಲಿತಾಂಶವು ಪ್ರಕಟವಾಗಿದ್ದು, ತಮ್ಮ ಮಕ್ಕಳು ಪಡೆದ ಅಂಕಗಳು, ಗಳಿಸಿದ ಪರ್ಸೆಂಟೇಜ್ ಜೊತೆಗೆ ಮುಂದಿನ ಕೋರ್ಸ್ ಆಯ್ಕೆಯ ಬಗ್ಗೆ ತಮ್ಮ ವ್ಯಾಪ್ತಿಗೆ ತೋಚಿದಂತೆ ಮಾತನಾಡುತ್ತಿದ್ದರು.

ಅದರಲ್ಲೊಬ್ಬರು ನಮ್ಮ ಹುಡುಗ ತುಂಬಾ ಪ್ರಾಮಾಣಿಕವಾಗಿ ಪರೀಕ್ಷೆ ಬರೆದಿದ್ದಾನೆ. ಆದರೆ ಇನ್ನೂ ಸ್ವಲ್ಪ ಪರ್ಸಂಟೇಜ್ ಮಾಡಬೇಕಿತ್ತು, ಹೆಚ್ಚಿಗೆ ಅಂಕಗಳನ್ನು ಗಳಿಸಬೇಕಿತ್ತು ಎನ್ನುವ ಅಸಮಾಧಾನವನ್ನು ತೋಡಿಕೊಂಡರು. ಅಷ್ಟೇ ಅಲ್ಲ ಅವನು ಪಡೆದ ಪರ್ಸಂಟೇಜ್‌ಗೆ ಯಾವ ಕಾಲೇಜಿನಲ್ಲಿ ಬೇಕಾದರೂ, ಯಾವ ಕೋರ್ಸ್‌ಗೆ ಬೇಕಾದರೂ ಸೀಟು ಸಿಕ್ಕೇ ಸಿಗುತ್ತದೆ. ಅವನಿಗೆ ಸೈನ್ಸ್ ಆಸಕ್ತಿ ಇದೆಯೋ ಇಲ್ಲವೋ ಎಂದು ತಿಳಿದುಕೊಳ್ಳುವ ಗೋಜಿಗೆ ಹೋಗುವ ಬದಲು ಪರ್ಸಂಟೇಜ್ ನೋಡಿ, ಸೈನ್ಸ್ ಮಾಡಿಬಿಡು ಎಂದು ಒತ್ತಾಯ ಪಡಿಸುತ್ತಿದ್ದೇವೆ ಎಂದರು. ಪಾಲಕರ ಒತ್ತಾಯಕ್ಕೆ ಮಣಿದು ಸೈನ್ಸ್‌ಗೆ ಒಪ್ಪಿಕೊಂಡನು.

ಮತ್ತೊಬ್ಬರು, ನಮ್ಮ ಮಗಳೂ ಅಷ್ಟೇ. ಸ್ವಂತ ಬುದ್ಧಿಯಿಂದಲೇ ಬರೆದಿದ್ದಾಳೆ. ಅವರ ಸೆಂಟರ್‌ನಲ್ಲಿ ಪರೀಕ್ಷೆ ತುಂಬಾ ಸ್ಟ್ರಿಕ್ಟ್ ಆಗಿ ನಡೆದವಂತೆ, ತನಗೆ ಗೊತ್ತಿರುವಷ್ಟೇ ಬರೆದು 90 ಪರ್ಸೆಂಟ್ ಮಾಡಿದ್ದಾಳೆ, ಅವಳಿಗೆ ಪಿಯುಸಿ ಕಾಮರ್ಸ್ ವಿಭಾಗಕ್ಕೆ ಸೇರಿಸಬೇಕು ಎಂದುಕೊಂಡಿದ್ದೇವೆ ಎಂದು ನಿಟ್ಟುಸಿರು ಬಿಟ್ಟರು. ಹೀಗೆಯೇ ಪ್ರತಿಯೊಬ್ಬರೂ ತಮ್ಮ ತಮ್ಮ ಮಕ್ಕಳು ಪರೀಕ್ಷೆಯಲ್ಲಿ ಪಡೆದ ಅಂಕಗಳು ಹಾಗೂ ಗಳಿಸಿದ ಪರ್ಸಂಟೇಜ್ ಕುರಿತು ಜಂಭದ ಮಾತುಗಳ ಜೊತೆಗೆ ಯಾರಿಗೆ ಯಾರೂ ಕಡಿಮೆ ಇಲ್ಲ ಎನ್ನುವಂತೆ ಪ್ರತಿಷ್ಠೆಯ ಮಾತುಗಳನ್ನಾಡಿದರು.

ಬಹುಶಃ ತಮ್ಮ ಮಕ್ಕಳನ್ನು ಕಾಲೇಜಿಗೆ ಅಡ್ಮಿಶನ್ ಮಾಡಿಸುವ ಸಲುವಾಗಿಯೇ ವಿಚಾರಿಸಲು ಕಾಲೇಜಿಗೆ ತೆರಳುತ್ತಿದ್ದರು ಎಂದೆನಿಸುತ್ತದೆ. ಅವರ ಮಾತು ಕೇಳಿದರೆ ಹಳ್ಳಿಯವರು ಬಹಳ ಮುಗ್ಧರು ಎನ್ನಬೇಕೋ, ಪ್ರಜ್ಞಾವಂತರು ಎನ್ನಬೇಕೋ ಎನ್ನುವ ರೀತಿ ಅವರ ಮಾತುಗಳಿದ್ದವು. ಕೆಲವು ಸಲ ಏನೂ ಗೊತ್ತಿಲ್ಲದವರಂತೆ ಮಾತನಾಡಿದರೆ, ಮತ್ತೆ ಸ್ವಲ್ಪ ಸಮಯಕ್ಕೆ ತಮಗೆಲ್ಲಾ ಗೊತ್ತಿದೆ ಎನ್ನುವ ಹಾಗೆ ಹರಟುತ್ತಿದ್ದರು. ಯಾಕೆಂದರೆ ಪಿಯುಸಿ ಸೈನ್ಸ್ ಮುಗಿಸಿ, ಸಿಇಟಿ ಮೆರಿಟ್‌ನಲ್ಲಿ ಆಯ್ಕೆಯಾಗಿ, ಡಾಕ್ಟರ್ ಕೋರ್ಸ್‌ಗೆ ಸೇರಿಸಿಬಿಟ್ಟರೆ ಅಲ್ಲಿಗೆ ನಮ್ ಜವಾಬ್ದಾರಿ ಮುಗಿಯಿತು ಎಂದು ಭವಿಷ್ಯ ನುಡಿಯುವವರಂತೆ ತಮ್ಮ ಜವಾಬ್ದಾರಿ ಕುರಿತು ಹೇಳಿದರು. ಇನ್ನೊಬ್ಬರು ತಮ್ಮ ಮಗಳು ಕಾಮರ್ಸ್ ಮುಗಿಯುತ್ತಿದ್ದಂತೆ ಒಳ್ಳೆಯ ಸರ್ಕಾರಿ ನೌಕರಿ ಇರುವ ವರನನ್ನು ಹುಡುಕಿ, ಎಷ್ಟು ಬೇಕಾದರೂ ಖರ್ಚಾಗಲಿ ಅದ್ದೂರಿಯಾಗಿ ಮದುವೆ ಮಾಡಿ ಕೈ ತೊಳ್ಕೊಂಡ್ರೆ ಅಲ್ಲಿಗೆ ನಮ್ಮ ಕೆಲಸ ಮುಗೀತು ನೋಡ್ರಿ ಅಂದರು.

ಅವರ ಮಾತನ್ನು ಕೇಳಿ ಏನು ಹೇಳಬೇಕೆಂದು ತಿಳಿಯದೆ ಸುಮ್ಮನೆ ಮಾತುಗಳಿಗೆ ಕಿವಿಯಾದೆ. ಅವರು ಹೇಳುತ್ತಿರುವ ಮಾತುಗಳ ಸ್ವಾರಸ್ಯವಿಷ್ಟೇ. ನಮ್ಮ ಮಕ್ಕಳ ಭವಿಷ್ಯ ನಾವು ಅಂದುಕೊಂಡಂತೆ ಆದರೆ ಸಾಕು ಎನ್ನುವಂತಿತ್ತು.

ಮಕ್ಕಳ ಆಸಕ್ತಿ, ಅಭಿರುಚಿ ಅವರ ಇಷ್ಟ ಕಷ್ಟ, ಮಕ್ಕಳ ಕನಸು, ಗುರಿ, ಉದ್ದೇಶವೇನಿದೆ, ಮುಂದಿನ ಜೀವನದಲ್ಲಿ ಏನಾಗಬಯಸಿದ್ದಾರೆ ಎಂದು ತಿಳಿಯುವುದರ ಬದಲು, ತಮಗೆ ಯಾವುದು ಸರಿ ಅನಿಸುತ್ತಿದೆಯೋ ಅದನ್ನೇ ಮಕ್ಕಳು ಕಲಿಯಬೇಕು, ಅದನ್ನೇ ಮಾಡಬೇಕು, ಅವರು ಅಂದುಕೊಂಡಂತೆ ಬದುಕಬೇಕು ಎಂದು ಆಸೆ ಪಡುತ್ತಿರುವುದು ಎಷ್ಟು ಮಟ್ಟಿಗೆ ಸರಿ? ಈಗ ಪ್ರೌಢಾವಸ್ಥೆಯನ್ನು ದಾಟಿ ಪ್ರಬುದ್ಧರಾಗಿ ಕಾಲೇಜು ಮೆಟ್ಟಿಲನ್ನು ಏರುತ್ತಿರುವಾಗ ಅವರ ಆಯ್ಕೆಗೆ ಅವಕಾಶ ಮಾಡಿಕೊಟ್ಟರೆ, ಇಲ್ಲವೇ ಅವರ ಕನಸು ತಿಳಿದು ನನಸು ಮಾಡಿದರೆ, ಕನಸಿನ ಹಕ್ಕಿಗೆ ರೆಕ್ಕೆಯಾದರೆ ಸಾಕಲ್ಲವೇ?



– ಈಶ್ವರ ಕುರಿ (ಜಕ್ಕಲಿ)

## ‘ಜನರಲ್ಲಿ ತಪ್ಪು ಅಭಿಪ್ರಾಯ ಬಿತ್ತುವುದು ಸರಿಯಲ್ಲ’

■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಎಚ್ ಡಿ ಕುಮಾರಸ್ವಾಮಿ ಹಾಗೂ ನಳಿನ್ ಕುಮಾರ್ ಕಟೀಲ್ ಅವರು ಚುನಾವಣೆಯಲ್ಲಿ ಸೋತು ಜನರಲ್ಲಿ ಪ್ರಚೋದಿಸಿ ತಪ್ಪು ಅಭಿಪ್ರಾಯ ಬಿತ್ತುತ್ತಿದ್ದಾರೆ ಎಂದು ಕೊಪ್ಪಳ ಜಿಲ್ಲಾ ಮಹಿಳಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಜ್ಯೋತಿ ಎಂ. ಗೊಂಡಬಾಳ ಮಾಜಿ ಸಿಎಂ ಹೆಚ್‌ಡಿಕೆ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ನಳಿನ್ ಕುಮಾರ್ ಕಟೀಲ್ ಅವರಿಗೆ ಸಲಹೆ ನೀಡಿದ್ದಾರೆ.



ಒಬ್ಬ ಮಾಜಿ ಸಿಎಂ ಆಗಿ ಏನು ಮಾತನಾಡಬೇಕು ಎಂಬ ಸಾಮಾನ್ಯ ಪ್ರಜ್ಞೆ ಇಲ್ಲದೇ ಎಚ್‌ಡಿಕೆ ಆಡಳಿತಕ್ಕೆ ತೊಂದರೆ ಕೊಡುತ್ತಿದ್ದಾರೆ.

ರಾಜ್ಯದಲ್ಲಿ ಜನರಲ್ಲಿ ತಪ್ಪು ಅಭಿಪ್ರಾಯ ತುಂಬಿ ದಂಗೆ ಎಬ್ಬಿಸುವ ಕಾರ್ಯ ಮಾಡುತ್ತಿದ್ದಾರೆ. ಹಾಗೆಯೇ ಬಿಜೆಪಿ ರಾಜ್ಯ ಅಧ್ಯಕ್ಷ ನಳಿನ್ ಕುಮಾರ ಕಟೀಲ್ ಕೂಡಾ ಜನರಿಗೆ ಸರಿಯಾದ ಮಾಹಿತಿ ನೀಡುವ ಬದಲು ಪ್ರಚೋದನಕಾರಿ ಮಾತುಗಳಿಂದ ಸಮಾಜದ ಸ್ವಾಸ್ಥ್ಯವನ್ನು ಕದಡುತ್ತಿದ್ದಾರೆ ಎಂದು ಆರೋಪಿಸಿದರು.

ಉಚಿತ ವಿದ್ಯುತ್ ಹಾಗೂ ಮಹಿಳೆಯರಿಗೆ ಉಚಿತ ಪ್ರಯಾಣದ ಬಗ್ಗೆ ಇನ್ನು ತೀರ್ಮಾನ ತೆಗೆದುಕೊಂಡಿಲ್ಲ. ಆದರೂ ಕರೆಂಟ್ ಬಿಲ್ ಕಟ್ಟಬೇಡಿ ಎಂದು ಜನರನ್ನು ಪ್ರಚೋದಿಸುತ್ತಿರುವುದು ಸರಿಯಲ್ಲ.

ಕಾಂಗ್ರೆಸ್ ಸರ್ಕಾರು ನೀಡಿದ ಗ್ಯಾರಂಟಿಗಳು ಅಧಿಕೃತವಾಗಿ ಜಾರಿಗೆ ಬರುವವರೆಗೂ ಆ ಬಗ್ಗೆ ಯಾವುದೇ ತಪ್ಪು ಅಭಿಪ್ರಾಯಗಳನ್ನು ಬಿತ್ತಬಾರದು ಎಂದು ಅವರು ಹೇಳಿದ್ದಾರೆ. ಜನಸಾಮಾನ್ಯರೂ ಕೂಡಾ ಪರಿಸ್ಥಿತಿಯನ್ನು ಅರಿತುಕೊಂಡು ತಾಳ್ಮೆಯಿಂದ ಇರಬೇಕು ಎಂದು ವಿನಂತಿಸಿಕೊಂಡಿದ್ದಾರೆ.

## ಶಾಂತಿ ಕದಡಿದರೆ ಕಾನೂನು ಕ್ರಮ: ಪ್ರಿಯಾಂಕ್ ಖರ್ಗೆ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಜ್ಯದಲ್ಲಿ ಶಾಂತಿ ಕದಡಿದರೆ ಭಜರಂಗದಳ ಮತ್ತು ಆರ್‌ಎಸ್‌ಎಸ್‌ನಂತಹ ಸಂಘಟನೆಗಳನ್ನು ತಮ್ಮ ಸರ್ಕಾರ ನಿಷೇಧಿಸುತ್ತದೆ. ಬಿಜೆಪಿ ನಾಯಕತ್ವವು ಅದನ್ನು ಒಪ್ಪಿಕೊಳ್ಳಲು ಸಾಧ್ಯವಾಗದಿದ್ದರೆ ಪಾಕಿಸ್ತಾನಕ್ಕೆ ಹೋಗಬಹುದು ಎಂದು ಸಚಿವ ಪ್ರಿಯಾಂಕ್ ಖರ್ಗೆ ಬುಧವಾರ ಹೇಳಿದರು.



ಕರ್ನಾಟಕವನ್ನು ಸ್ವರ್ಗವನ್ನಾಗಿ ಮಾಡುತ್ತೇವೆ ಎಂದು ಭರವಸೆ ನೀಡಿದ್ದೇವೆ. ಶಾಂತಿ ಕದಡಿದರೆ ಅದು ಭಜರಂಗದಳ ಅಥವಾ ಆರ್‌ಎಸ್‌ಎಸ್ ಎಂದು ಪರಿಗಣಿಸುವುದಿಲ್ಲ. ಕಾನೂನು ಕೈಗೆತ್ತಿಕೊಂಡಾಗ ನಿಷೇಧ ಹೇರಲಾಗುವುದು. ಭಜರಂಗದಳ ಸೇರಿದಂತೆ ಯಾವುದೇ ಸಂಘಟನೆಯನ್ನು ನಿಷೇಧಿಸುತ್ತೇವೆ ಎಂಬುದಾಗಿ ಪ್ರಣಾಳಿಕೆಯಲ್ಲಿ ಹೇಳಿದ್ದೇವೆ ಎಂದು ಖರ್ಗೆ ತಿಳಿಸಿದ್ದಾರೆ.

ಹಿಜಾಬ್, ಹಲಾಲ್ ಮತ್ತು ಗೋಹತ್ಯೆ ಕಾನೂನುಗಳ ಮೇಲಿನ ನಿಷೇಧವನ್ನು ಸರ್ಕಾರ ಹಿಂಪಡೆಯಲಿದೆ ಎಂದು ಅವರು ತಿಳಿಸಿದ್ದಾರೆ. ಸಮಾಜದಲ್ಲಿ ಕಾನೂನು ಮತ್ತು ಪೊಲೀಸರ ಭಯವಿಲ್ಲದೆ ಕೆಲವು ಸಮಾಜಘಾತುಕ ಶಕ್ತಿಗಳು ಮುಕ್ತವಾಗಿ ವಿಹರಿಸುತ್ತಿವೆ. ಮೂರು ವರ್ಷಗಳಿಂದ ಈ ಪ್ರವೃತ್ತಿ ನಡೆಯುತ್ತಿದೆ ಎಂದು ಅವರು ಒತ್ತಿ ಹೇಳಿದ್ದಾರೆ.

## ಮಂಜುನಾಥ ಬಡಿಗೇರಗೆ ಚುಸಾಪ ಸನ್ಮಾನ



■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ನಗರದ ಗವಿಸಿದ್ದೇಶ್ವರ ಪದವಿ ಪೂರ್ವ ಕಾಲೇಜಿನಲ್ಲಿ ಕನ್ನಡ ಉಪನ್ಯಾಸಕರಾಗಿ ಸೇವೆ ಸಲ್ಲಿಸುತ್ತಿರುವ ಮಂಜುನಾಥ ಚಿದಾನಂದಪ್ಪ ಬಡಿಗೇರ ಅವರಿಗೆ, ಹಂಪಿಯ ಕನ್ನಡ ವಿಶ್ವವಿದ್ಯಾಲಯವು ಪಿಎಚ್‌ಡಿ ಪದವಿ ನೀಡಿದ್ದಕ್ಕೆ ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ ವತಿಯಿಂದ ಸನ್ಮಾನಿಸಲಾಯಿತು.

ಬಡಿಗೇರ ಅವರು ಜಾನಪದ ಅಧ್ಯಯನ ವಿಭಾಗದಲ್ಲಿ ‘ಕೊಪ್ಪಳ ಜಿಲ್ಲೆಯ ವೃತ್ತಿ ರಂಗಭೂಮಿ ಸಾಂಸ್ಕೃತಿಕ ಅಧ್ಯಯನ’ ಎಂಬ ವಿಷಯದ ಮೇಲೆ ಸಂಶೋಧನೆ ಕೈಗೊಂಡಿದ್ದರು.

ಕೊಪ್ಪಳ ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಹಾಗೂ ಪ್ರಾಚಾರ್ಯರಾದ ಹನುಮಂತಪ್ಪ ಅಂಡಗಿ ಚಿಲವಾಡಗಿ, ಪ್ರಾಚಾರ್ಯರಾದ ಡಾ.ವೀರೇಶಕುವಾರ, ಪ್ರಾಧ್ಯಾಪಕರುಗಳಾದ ಡಾ.ಸಿದ್ದಲಿಂಗಪ್ಪ ಕೊಟ್ನೆಕಲ್, ಡಾ.ಬಿ.ಎನ್. ತಳವಾರ, ಶಿವನಗೌಡ ಪೊಲೀಸ ಪಾಟೀಲ, ಅಶೋಕ ಓಜನಹಳ್ಳಿ, ಗುರುರಾಜ ವೈ ಜಿ ಈಶಪ್ಪ ಮೇಟಿ, ಆದೇಶ ಎ.ಜಿ, ಶಿವಲೀಲಾ, ವೀಣಾ ಅರಳೆಲೆಮಠ, ಗೀತಾಎಕ್ಲಾಸಪುರ, ದೀಪಾ ಕವಲೂರು ಮತ್ತು ಇತರರು ಉಪಸ್ಥಿತರಿದ್ದರು.

## ಸುಗಮ ಸಂಗೀತ ಕಾರ್ಯಕ್ರಮ ಇಂದು

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಕರ್ನಾಟಕ ವಿದ್ಯಾವರ್ಧಕ ಸಂಘದ ಕಲಾ ಮಂಟಪವು, ಗುರುವಾರ ಸಂಜೆ 6 ಗಂಟೆಗೆ, ರಾ.ಹ. ದೇಶಪಾಂಡೆ ಸಭಾಭವನದಲ್ಲಿ ಹಿರಿಯ ಸಂಗೀತ ಕಲಾವಿದ ಹುಬ್ಬಳ್ಳಿಯ ರವೀಂದ್ರ ಜಕಾತಿ ಅವರಿಂದ ‘ಸುಗಮ ಸಂಗೀತ’ ಕಾರ್ಯಕ್ರಮ ಏರ್ಪಡಿಸಿದೆ.

ಧಾರವಾಡದ ಹಿರಿಯ ಸಂಗೀತ ವಿದ್ವಾಂಸರಾದ ಶ್ರೀಕಾಂತ ಕುಲಕರ್ಣಿ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಧಾರವಾಡದ ಶಾಸ್ತ್ರೀಯ ಸಂಗೀತ ಕಲಾವಿದರಾದ ಶ್ರೀಮತಿ ಸುಜಾತ ಕಮ್ಮಾರ(ಗುರವ) ಆಗಮಿಸುವರು.

ಆಸಕ್ತರು ಭಾಗವಹಿಸಬೇಕೆಂದು ಸಂಘದ ಪ್ರಧಾನ ಕಾರ್ಯದರ್ಶಿ ಶಂಕರ ಹಲಗತ್ತಿ ಹಾಗೂ ಕಲಾ ಮಂಟಪದ ಸಂಚಾಲಕ ಶ್ರೀಮತಿ ವಿಶ್ವೇಶ್ವರಿ ಬ. ಹಿರೇಮಠ ತಿಳಿಸಿದ್ದಾರೆ.

## ನಿಧನ ವಾರ್ತೆ

### ನಿಂಗಮ್ಮ ಜೀವಪ್ಪ ಸಾತಪುತೆ



**ಲಕ್ಷ್ಮೇಶ್ವರ:** ಪಟ್ಟಣದ ಹುಲಗೇರಿ ಬಣದ ಹಿರಿಯ ನಿವಾಸಿ, ಶತಾಯುಷಿ ನಿಂಗಮ್ಮ ಜೀವಪ್ಪ ಸಾತಪುತೆ (102) ಬುಧವಾರ ನಿಧನ ಹೊಂದಿದರು. ಮೃತರಿಗೆ ಇಬ್ಬರು ಮಕ್ಕಳು, 8 ಜನ ಮೊಮ್ಮಕ್ಕಳು ಸೇರಿ ಅಪಾರ ಬಂಧು ಬಳಗವಿದೆ.

ಸಚಿವ ಸ್ಥಾನದ ವಿಚಾರವಾಗಿ ಹಿರಿಯ ಶಾಸಕರ ಅಸಮಾಧಾನ

## ದೆಹಲಿಗೆ ದೌಡಾಯಿಸಿದ ಸಚಿವಾಕಾಂಕ್ಷಿಗಳ ದಂಡು

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಸರ್ಕಾರ ರಚನೆಯಾಗಿ 8 ಜನ ಶಾಸಕರು ಮಂತ್ರಿಗಳಾಗಿ ಪ್ರಮಾಣ ವಚನ ಸ್ವೀಕರಿಸಿದ ಬಳಿಕ ಕಾಂಗ್ರೆಸ್ ಪಾಳಯದಲ್ಲಿ ಸಚಿವಾಕಾಂಕ್ಷಿಗಳ ಒತ್ತಡ ಹೆಚ್ಚುತ್ತಲೇ ಹೋಗಿದೆ. ಬುಧವಾರ ಸಂಪುಟ ವಿಸ್ತರಣೆ ಕುರಿತ ಹೈಕಮಾಂಡ್ ನಾಯಕ ಭೇಟಿಗೆ ಸಿದ್ದರಾಮಯ್ಯ ಹಾಗೂ ಡಿ ಕೆ ಶಿವಕುಮಾರ್ ಹಾಗೂ ಸಚಿವ ಸ್ಥಾನದ ಆಕಾಂಕ್ಷಿಗಳು ಕೂಡ ದೆಹಲಿಯತ್ತ ಮುಖ ಮಾಡಿದ್ದಾರೆ.



ಕಾಂಗ್ರೆಸ್‌ನ ಹಲವು ಹಿರಿಯ ಶಾಸಕರು ಸಚಿವ ಸ್ಥಾನ ವಿಚಾರವಾಗಿ ಅಸಮಾಧಾನವನ್ನು ಹೊರಹಾಕಿದ್ದು, ಸಿದ್ದರಾಮಯ್ಯ ಅವರ ಬಳಿಯೂ ಸಚಿವ ಸ್ಥಾನಕ್ಕಾಗಿ ಲಾಬಿ ನಡೆಸಿದ್ದಾರೆ. ಈಗಾಗಲೇ ಯಾರಿಗೆ ಸಚಿವ ಸ್ಥಾನ ನೀಡಬೇಕು ಎನ್ನುವ ಕುರಿತು ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೆವಾಲ ಅವರು ಸಿದ್ದರಾಮಯ್ಯ ಅವರ ಜೊತೆಗೆ ಪ್ರಾಥಮಿಕ ಸಭೆ ನಡೆಸಿ ಚರ್ಚೆಸಿದ್ದಾರೆ. ಕಾಂಗ್ರೆಸ್ ಹೈಕಮಾಂಡ್ ಜೊತೆ ಚರ್ಚಿಸಲು ಸಿದ್ದರಾಮಯ್ಯ ಮುಂದಾಗುತ್ತಿದ್ದಂತೆ ಸಚಿವ ಸ್ಥಾನದ ಆಕಾಂಕ್ಷಿಗಳು ದೆಹಲಿಯತ್ತ ದೌಡಯಿಸಿದ್ದಾರೆ.

ಸಚಿವ ಹಾಗೂ ನಿಗಮ ಮಂಡಳಿಗಳ ನೇಮಕಾತಿ ಕುರಿತು ದೆಹಲಿ ವರಿಷ್ಠರೊಂದಿಗೆ ಸಮಾಲೋಚಿಸುವ ಸಾಧ್ಯತೆ ಇದೆ. ಮೊದಲ ಹಂತದಲ್ಲಿ ಅವಕಾಶ ಕಳೆದುಕೊಂಡ ಹಿರಿಯರು ಈಗಾಗಲೇ ಪಕ್ಷದ ನಾಯಕರ ವಿರುದ್ದ ಬೇಸರಗೊಂಡಿದ್ದು, ಜಾತಿ ಹಾಗೂ ಪ್ರಾದೇಶಿಕತೆ ಆಧಾರದ ಮೇಲೆ ಯುವ ನಾಯಕರು ಕೂಡ ಸಂಪುಟ ಸೇರಲು ಲಾಬಿ ನಡೆಸುತ್ತಿದ್ದಾರೆ. ಮುಂಬರುವ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಅಳೆದುತೂಗಿ ಸಂಪುಟ ವಿಸ್ತರಣೆ ಮಾಡಲು ಹೈಕಮಾಂಡ್ ನಿರ್ಧರಿಸಿದೆ ಎನ್ನಲಾಗಿದೆ. ಸಿದ್ದರಾಮಮಯ್ಯ ಹಾಗೂ ಡಿ ಕೆ ಶಿವಕುಮಾರ್ ತಮ್ಮ ತಮ್ಮ ಬಣದವರಿಗೆ ಸಚಿವ ಸ್ಥಾನವನ್ನ ಕೊಡಿಸುವ ಸಲುವಾಗಿ ಚರ್ಚೆ ನಡೆಸಲಿದ್ದಾರೆ. ಶಾಸಕ ದಿನೇಶ್ ಗುಂಡೂರಾವ್, ಕೃಷ್ಣ ಬೈರೇಗೌಡ, ನಾಗೇಂದ್ರ, ವಿಜಯಾನಂದ ಕಾಶಪ್ಪನವರ್ ಸೇರಿದಂತೆ ಹಲವು ಶಾಸಕರು ದೆಹಲಿಗೆ ಪ್ರಯಾಣ ಬೆಳೆಸಿದ್ದಾರೆ.

## ಸ್ಪೀಕರ್ ಆದವರು ಚುನಾವಣೆಯಲ್ಲಿ ಸೋಲುತ್ತಾರೆಂಬುದು ಮೌಢ್ಯ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ವಿಜಯಸಾಕ್ಷಿ ಸುದ್ದಿ,

ಸ್ಪೀಕರ್ ಆದವರು ಚುನಾವಣೆಯಲ್ಲಿ ಸೋಲುತ್ತಾರೆ ಎಂಬುದು ಮೌಢ್ಯ. ಈ ರೀತಿಯ ಮೌಢ್ಯವನ್ನು ಹರಿಯಬಿಡಬಾರದು ಎಂದು ಮಾಜಿ ಸಚಿವ ಬಸವರಾಜ ರಾಯರೆಡ್ಡಿ ಹೇಳಿದರು.



ಈ ಕುರಿತು ಬುಧವಾರ ಮಾತನಾಡಿದ ಅವರು, ಈ ಹಿಂದೆ ಸ್ಪೀಕರ್ ಆಗಿದ್ದವರೂ ಮತ್ತೊಮ್ಮೆ ಚುನಾವಣೆಯಲ್ಲಿ ಗೆದ್ದು ಸದನಕ್ಕೆ ಆರಿಸಿ ಬಂದಿದ್ದರು. ಮಾಜಿ ಸ್ಪೀಕರ್ ರಮೇಶ್ ಕುಮಾರ್, ಕಾಗೋಡು ತಿಮ್ಮಪ್ಪ ಮತ್ತೊಮ್ಮೆ ಆರಿಸಿ ಬಂದಿದ್ದರು ಎಂದು ತಿಳಿಸಿದ್ದಾರೆ.

ಹಲವು ಸ್ಪೀಕರ್‌ಗಳು ಒಳ್ಳೆಯ ಕೆಲಸ ಮಾಡಿದ್ದಾರೆ. ಸ್ಪೀಕರ್ ಆದವರು ಪಕ್ಷದ ಸದಸ್ಯತ್ವಕ್ಕೆ ರಾಜೀನಾಮೆ ಕೊಡಬೇಕು ಎಂದೇನಿಲ್ಲ, ಆದರೆ ಪಕ್ಷದ ಪ್ರಾಥಮಿಕ ಸದಸ್ಯತ್ವಕ್ಕೆ ರಾಜೀನಾಮೆ ಕೊಡುವುದು ಅವರಿಗೆ ಬಿಟ್ಟ ವಿಚಾರ ಎಂದಿದ್ದಾರೆ.

## ಟಿಪ್ಪು ಜಯಂತಿ ಆಚರಣೆ ಕೈಬಿಟ್ಟ ಕಾಂಗ್ರೆಸ್ ಸರ್ಕಾರ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

2023 ಕರ್ನಾಟಕ ವಿಧಾನಸಭೆ ಚುನಾವನೆಯಲ್ಲಿ ಕಾಂಗ್ರೆಸ್ ಪಕ್ಷ 135 ಸ್ಥಾನಗಳೊಂದಿಗೆ ಬಹುಮತ ಪಡೆದು ಸರ್ಕಾರ ರಚಿಸಿದ್ದರೆ, 66 ಸ್ಥಾನಗಳಲ್ಲಿ ಗೆದ್ದಿರುವ ಬಿಜೆಪಿ ವಿಪಕ್ಷ ಸ್ಥಾನದಲ್ಲಿ ಕುಳಿತಿದೆ. ಇದೀಗ ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದ ತಕ್ಷಣ ಟಿಪ್ಪು ಜಯಂತಿ ಆಚರಣೆ ವಿಚಾರ ಮತ್ತೆ ಸದ್ದು ಮಾಡುತ್ತಿದೆ.



ಆದರೆ, ಸಿಎಂ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ವಿವಾದಿತ ಟಿಪ್ಪು ಜಯಂತಿ ಆಚರಣೆಯನ್ನು ಕೈ ಬಿಟ್ಟಿದೆ. ಈ ಬಾರಿ ಎಚ್ಚರಿಕೆಯ ಹೆಜ್ಜೆ ಇಡಲು ನಿರ್ಧರಿಸಿರುವ ಕಾಂಗ್ರೆಸ್, ಮತ್ತೆ ಟಿಪ್ಪು ಜಯಂತಿ ಆಚರಿಸಿ ವಿವಾದ ಮೈಮೇಲೆ ಎಳೆದುಕೊಳ್ಳದಿರಲು ತೀರ್ಮಾನಿಸಿದಂತಿದೆ. ಕಳೆದ ಬಾರಿ 2013ರಿಂದ 2018ರವರೆಗೆ ಇದ್ದ ಅಧಿಕಾರವಧಿಯಲ್ಲಿ ಟಿಪ್ಪು ಜಯಂತಿ ಆಚರಿಸಿ ರಾಜ್ಯದಲ್ಲಿ ಹಿಂದೂಗಳ ಆಕ್ಷೇಪಕ್ಕೆ ಕಾರಣವಾಗಿದ್ದರು. 2023ರ ಏಪ್ರಿಲ್‌ನಿಂದ 2024ರ ಮಾರ್ಚ್ ತಿಂಗಳವರೆಗಿನ ಮಹಾಪುರಷರ ಜಯಂತಿ ಹಾಗೂ ಆಚರಣೆ ಕಾರ್ಯಕ್ರಮಗಳ ಒಟ್ಟು 31 ಜಯಂತಿಗಳ ಪಟ್ಟಿಯನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬಿಡುಗಡೆ ಮಾಡಿದೆ.

## ಉತ್ತರಕನ್ನಡದಲ್ಲಿ ಪಾತಾಳ ಕಂಡ ಅಂತರ್ಜಲ: ನೀರಿಗಾಗಿ ಪರದಾಟ

■ ವಿಜಯಸಾಕ್ಷಿ ಸುದ್ದಿ, ಕಾರವಾರ

ಉತ್ತರ ಕನ್ನಡದಲ್ಲಿ ದಿನ ಕಳೆದಂತೆ ಬಿಸಿಲ ಬೇಗೆ ಕಾಡತೊಡಗಿದೆ. ಅಂತರ್ಜಲ ಮಟ್ಟ ಪಾತಾಳಕ್ಕೆ ತಲುಪಿದ್ದು, ನೀರಿಗಾಗಿ ಹಾಹಾಕಾರ ಶುರುವಾಗಿದೆ. ಜಿಲ್ಲೆಯಲ್ಲಿ ನೂರಕ್ಕೂ ಹೆಚ್ಚು ಗ್ರಾಮಗಳಲ್ಲಿ ನೀರಿನ ಕೊರತೆ ಎದುರಾಗಿರುವ ಕಾರಣ ಕೆಲವೆಡೆ ಟ್ಯಾಂಕರ್‌ಗಳ ಮೂಲಕ ನೀರು ಪೂರೈಸಿ ದಾಹ ತೀರಿಸುವ ಪರಿಸ್ಥಿತಿ ಬಂದೊದಗಿದೆ.

ಜಿಲ್ಲೆಯಲ್ಲಿ ಕಳೆದೊಂದು ತಿಂಗಳಿಂದ ಬಿಸಿಲಿನ ತಾಪಕ್ಕೆ ಜನ ನಿತ್ಯವೂ ಬಸವಳಿಯುವ ಪರಿಸ್ಥಿತಿ ನಿರ್ಮಾಣವಾಗಿದೆ. ಜಿಲ್ಲೆಯ ಪ್ರಮುಖ ನದಿಗಳಲ್ಲಿ ನೀರಿನ ಹರಿವು ನಿಲ್ಲುವ ಹಂತಕ್ಕೆ ತಲುಪಿದ್ದು, ನದಿಗಳಿಂದ ನೀರು ಪೂರೈಕೆಯೇ ಸ್ಥಗಿತಗೊಳ್ಳುವ ಆತಂಕ ಎದುರಾಗಿದೆ. ಕಾರವಾರ, ಅಂಕೋಲಾ ನಗರ ಹಾಗೂ ವಿವಿಧ ಗ್ರಾಮಗಳಿಗೆ ನೀರು ಪೂರೈಸುವ ಗಂಗಾವಳಿ, ಕುಮಟಾ, ಹೊನ್ನಾವರಕ್ಕೆ ನೀರು ಪೂರೈಸುವ ಅಘನಾಶಿನಿಯಲ್ಲಿ ನೀರಿನ ಹರಿವು ಕಡಿಮೆಯಾಗಿದೆ. ಶಿರಸಿ ನಗರಕ್ಕೆ ನೀರು ಪೂರೈಸುವ ಕೆಂಗ್ರ ಹೊಳೆ ಹರಿವು ನಿಲ್ಲಿಸಿದೆ.

**ನೀವೂ ನಮ್ಮ ಜೊತೆ ಕೈಜೋಡಿಸಿ**

**‘ವಿಜಯಸಾಕ್ಷಿ’**

ನಿಮ್ಮ ಮನೆಯ, ಮನದ ಪತ್ರಿಕೆ ಆಗಲೆಂದು ನಾವು ಬಯಸುತ್ತೇವೆ. ಇಲ್ಲಿ ನಿಮ್ಮ ಅಭಿಪ್ರಾಯ ಹಂಚಿಕೊಳ್ಳಲು ಮುಕ್ತ ಸ್ವಾಗತವಿದೆ.
ನೀವು ಪತ್ರಿಕೆಯ ಕುರಿತು ತಮ್ಮ ಸಲಹೆ, ಮೆಚ್ಚುಗೆ ನಮಗೆ ಬರೆದು ಕಳಿಸಿ..
ಲೇಖನ, ಸಣ್ಣ ಕತೆ, ಕವನ, ಪ್ರಬಂಧ, ಪ್ರವಾಸ ಅನುಭವ ಈ ಕುರಿತು ನೀವೂ ಬರೆಯಬಹುದು.
E-mail: vijayasakshidaily@gmail.com
ಮೊ : 9019256545

## 'ಸದನದ ಘನತೆಯನ್ನು ಎತ್ತಿಹಿಡಿಯುವ ಜವಾಬ್ದಾರಿ ಸಭಾಧ್ಯಕ್ಷರ ಮೇಲಿದೆ'

▶▶ ಮೊದಲನೇ ಪುಟದಿಂದ

ಸಭಾಧ್ಯಕ್ಷರಾದವರು ಪಕ್ಷಾತೀತವಾಗಿ ಕೆಲಸ ಮಾಡಬೇಕೆಂದು ಎಲ್ಲ ಸದಸ್ಯರೂ ಬಯಸುತ್ತಾರೆ. ವಿಧಾನಸಭೆಯಲ್ಲಿ ಈ ರಾಜ್ಯದ ಜ್ವಲಂತ ಸಮಸ್ಯೆಗಳ ಬಗ್ಗೆ ಮಾತನಾಡಬೇಕು. ಇತ್ತೀಚಿನ ದಿನಗಳಲ್ಲಿ ವಿಧಾನಸಭೆಯ ಗುಣಮಟ್ಟ ಕಡಿಮೆಯಾಗುತ್ತಿದೆ ಎಂಬ ಭಾವನೆ ಅನೇಕರಲ್ಲಿದೆ. ಆ ಭಾವನೆ ಹೋಗಲಾಡಿಸುವ ಕೆಲಸವನ್ನು ಮಾಡಬೇಕಿದೆ. ವಿಧಾನಸಭೆ ಪ್ರಜಾಪ್ರಭುತ್ವದ ದೇಗುಲ. ಇಲ್ಲಿ ಏಳು ಕೋಟಿ ಕನ್ನಡಿಗರ ಸಮಸ್ಯೆಗಳನ್ನು ಚರ್ಚಿಸಬೇಕು ಎಂದರು.

ಸದನದ ಅಧ್ಯಕ್ಷರಿಗೆ ಪ್ರಜಾಪ್ರಭುತ್ವದಲ್ಲಿ ಮಹತ್ವದ ಸ್ಥಾನವಿದೆ.

ಸದನದ ಚರ್ಚೆಯಲ್ಲಿ ಅನೇಕ ವಿಚಾರಗಳು ಬರುತ್ತವೆ. ಚರ್ಚೆಯಲ್ಲಿ ಭಾಗವಹಿಸುವಾಗ ಪದಬಳಕೆಯಲ್ಲಿ ಬಹಳ ಎಚ್ಚರಿಕೆ ವಹಿಸಬೇಕು. ಅಸಂವಿಧಾನಾತ್ಮಕ ಪದಬಳಕೆಗೆ ಅವಕಾಶವಿರಬಾರದು. ರಚನಾತ್ಮಕವಾದ ಸಲಹೆಗಳನ್ನು ನೀಡಲು ಅವಕಾಶ ಹಾಗೂ ಹಕ್ಕುಗಳಿವೆ ಎಂದು ಸಲಹೆ ನೀಡಿದರು.

## ಪರಿಸರ ಸಂರಕ್ಷಣೆ ನಮ್ಮೆಲ್ಲರ ಕರ್ತವ್ಯ: ಶೋಭಾ ಪೋಳ

▶▶ ಮೊದಲನೇ ಪುಟದಿಂದ

ಕೈಗಾರಿಕೆಗಳಲ್ಲಿ ತ್ಯಾಜ್ಯ ನೀರಿನ ಸಂಸ್ಕರಣಾ ಘಟಕ ಅಳವಡಿಸಿ ಮರುಬಳಕೆ ಹಾಗೂ ಪುನರ್ ಬಳಕೆ, ಸ್ವಚ್ಛ ಹಾಗೂ ಮಾಲಿನ್ಯ ಮುಕ್ತ ಪರಿಸರವನ್ನು ನಿರ್ಮಿಸಲು ತಿಳಿಸಿದರು. ಆಹಾರ ಧಾನ್ಯ ಬೆಳೆಯಲು ರಸಾಯನಿಕಯುಕ್ತ ಗೊಬ್ಬರ ಉಪಯೋಗಿಸುವುದರಿಂದ ಕುಡಿಯುವ ನೀರಿನಲ್ಲಿ ಸಹ ರಸಾಯನಿಕಗಳು ಸೇರಿಕೊಳುತ್ತಿವೆ. ಅಂತಹ ನೀರನ್ನು ನಾವು ಕುಡಿಯುವುದರಿಂದ ಆರೋಗ್ಯದ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತಿದೆ. ಎಂದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ ಎಲ್ಲ ಅಧಿಕಾರಿಗಳು/ಸಿಬ್ಬಂದಿಗಳು, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಪ್ರಾದೇಶಿಕ ಕಛೇರಿಯ ಪರಿಸರ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು 'ಪರಿಸರ ಸಂರಕ್ಷಣೆ ಕುರಿತು ಪರಿಸರವನ್ನು ರಕ್ಷಿಸಲು ದೈನಂದಿನ ಜೀವನದಲ್ಲಿ ಸಾಧ್ಯವಿರುವ ಎಲ್ಲಾ ಬದಲಾವಣೆಗಳನ್ನು ಮಾಡುತ್ತೇನೆ. ಪರಿಸರ ಸ್ನೇಹಿ ಅಭ್ಯಾಸಗಳ ಪ್ರಾಮುಖ್ಯತೆ ಬಗ್ಗೆ ನನ್ನ ಕುಟುಂಬ, ಸ್ನೇಹಿತರು ಮತ್ತು ಇತರರನ್ನು ನಿರಂತರವಾಗಿ ಪ್ರೇರೇಪಿಸಲು ಬದ್ಧನಾಗಿದ್ದೇನೆ' ಎಂಬ ಪ್ರಮಾಣ ವಚನ ಸ್ವೀಕರಿಸುವ ಮೂಲಕ ಕಾರ್ಯಕ್ರಮ ಆರಂಭವಾಯಿತು. ಪ್ರಕಾಶ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

## 'ಗ್ರಾಮಗಳಲ್ಲಿ ಸ್ವಚ್ಛತೆಗೆ ಆದ್ಯತೆ ನೀಡಿ'

▶▶ ಮೊದಲನೇ ಪುಟದಿಂದ

ಗ್ರಾಮೀಣ ಪ್ರದೇಶಗಳಲ್ಲಿನ ಚರಂಡಿಗಳು, ದೊಡ್ಡ ಗಟಾರುಗಳು, ಹಳ್ಳದ ಸೇತುವೆಗೆ ಕಟ್ಟಿರುವ ಹೂಳೆತ್ತುವ ಕೆಲಸವನ್ನು ಮಾಡಬೇಕು.

ಮಳೆ ನೀರು ಸರಾಗವಾಗಿ ಹರಿದು ಹೋಗುವಂತೆ ಸ್ವಚ್ಛಗೊಳಿಸಬೇಕು. ರಸ್ತೆಬದಿಯ ಮರಗಳ ಸ್ಥಿತಿಗತಿಯನ್ನು ಪರಿಶೀಲಿಸಬೇಕು. ಅಗತ್ಯವೆನಿಸಿದರೆ ಅರಣ್ಯ ಇಲಾಖೆಯ ಜತೆಗೂಡಿ ನಿಯಮಾನುಸಾರ ಟೊಂಗೆಗಳನ್ನು ಅಥವಾ ಮರವನ್ನು ತೆರವುಗೊಳಿಸಬೇಕು, ಅಲ್ಲದೇ ಹಳೆಯದಾದ ಸರ್ಕಾರಿ ಶಾಲಾ-ಕಾಲೇಜು, ಅಂಗನವಾಡಿ ಕಟ್ಟಡಗಳ ಪರಿಶೀಲನೆ ಮಾಡಿ ಅಗತ್ಯವಿದ್ದರೆ ಮುಂಜಾಗೃತಾ ಕ್ರಮ ಕೈಗೊಳ್ಳಬೇಕು, ಗುಡಿಸಲು ವಾಸಿ, ಸ್ಲಂ ಪ್ರದೇಶದಲ್ಲಿ ಜನರ ಬಗ್ಗೆ ನಿಗಾವಹಿಸಬೇಕು. ಕುಡಿಯುವ ನೀರು, ಬೀದಿ ದೀಪ, ಸ್ವಚ್ಛತೆ ಅಗತ್ಯ ಮೂಲಭೂತ ಸೌಲಭ್ಯಗಳಲ್ಲಿ ಕಲ್ಪಿಸುವ ಕಾರ್ಯ ಕೈಗೊಳ್ಳಬೇಕು.ಈ ನಿಟ್ಟಿನಲ್ಲಿ ಪುರಸಭೆ, ಗ್ರಾಪಂನವರ ಪಾತ್ರ ಮುಖ್ಯವಾಗಿದೆ. ಪಿಡಬ್ಲೂಡಿ, ಜಿಪಂ ಮತ್ತು ಗ್ರಾಪಂ ಅಧಿಕಾರಿಗಳು ಸಂಪೂರ್ಣ ಹಾಳಾಗಿರುವ ರಸ್ತೆಗಳ ಗುಂಡಿ ಮುಚ್ಚುವ ಮತ್ತು ಪ್ರಗತಿ ಹಂತದಲ್ಲಿರುವ ಕಾಮಗಾರಿಗಳನ್ನು ಪೂರ್ಣಗೊಳಿಸಬೇಕು. ಏನಾದರೂ ಗಂಭೀರವಾದ ಅವಘಡ, ಘಟನಾವಳಿಗಳು ಸಂಭವಿಸಿದರೆ ತಹಸೀಲ್ದಾರ ಮತ್ತು ತಾಲೂಕು ಮಟ್ಟದ ಅಧಿಕಾರಿಗಳ ಗಮನಕ್ಕೆ ತರಬೇಕು ಎಂದು ತಿಳಿಸಿದರು.

ಸಭೆಯಲ್ಲಿ ತಾಪಂ ಇಓ ಎಂ.ವಿ ಬಡಿಗೇರ, ಮುಖ್ಯಾಧಿಕಾರಿ ಶಂಕರ ಹುಲ್ಲಮ್ಮನವರ, ಸಿಪಿಐ ವಿಕಾಸ ಲಮಾಣಿ, ಡಾ. ಎನ್.ವಿ ಹವಳದ, ಬಿ.ಎಸ್ ಹಿರೇಮಠ, ಬಿ.ಎಂ ಕಾತರಾಳ ಸೇರಿ ತಾಲೂಕು ಮಟ್ಟದ ಅಧಿಕಾರಿಗಳು ಇದ್ದರು.

## ಕಾಪು ಬಳಿ ರಾಷ್ಟ್ರೀಯ ಹೆದ್ದಾರಿಯಲ್ಲಿ ಕಾರ್ ರೇಸಿಂಗ್, ಅಪಾಯಕಾರಿ ಸಾಹಸ: ನಾಲ್ವರು ಯುವಕರ ಬಂಧನ

■ ವಿಜಯಸಾಕ್ಷಿ ಸುದ್ದಿ, ಕಾಪು

ಕಾರುಗಳಲ್ಲಿ ಸ್ಟಂಟ್ ಗಳನ್ನು ಮಾಡುತ್ತಿದ್ದ ನಾಲ್ವರ ವಿರುದ್ಧ ಕಾಪು ಪೊಲೀಸರು ಪ್ರಕರಣ ದಾಖಲಿಸಿದ್ದಾರೆ. ರಾಷ್ಟ್ರೀಯ ಹೆದ್ದಾರಿ 66 ರಲ್ಲಿ ಮೂಡಬೆಟ್ಟು-ಮೂಲೂರು ನಡುವೆ ಕಾರಿನಲ್ಲಿ ನಾಲ್ವರು ಯುವಕರು ಸ್ಟಂಟ್ಸ್ ಮಾಡುತ್ತಿದ್ದ ವೀಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗತೊಡಗಿತ್ತು.

ಉದ್ಯಾವರದ ಅಯಾನ್ (24), ಕುಂಜಿಬೆಟ್ಟುವಿನ ಮಿಶಾಲ್ವುದ್ದೀನ್ (23), ಉಡುಪಿಯ ಶಾನೂನ್ ಡಿಸೋಜಾ (25) ಮತ್ತು ವಿವೇಕ್ (23) ವಿರುದ್ಧ ಐಪಿಸಿ ಸೆಕ್ಷನ್ 279 ಮತ್ತು 336 ರ ಅಡಿಯಲ್ಲಿ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ. ಕಾಪು ಪೊಲೀಸ್ ಠಾಣೆಯ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ (ಕಾನೂನು ಮತ್ತು ಸುವ್ಯವಸ್ಥೆ) - ಸುಮಾ ಬಿ ಅವರಿಗೆ ಬಂದ ಕರೆಯಲ್ಲಿ ಕಾಪು ಪೊಲೀಸ್ ಠಾಣಾ ವ್ಯಾಪ್ತಿಯ ಎನ್‌ಎಚ್ 66 ರಲ್ಲಿ ನಾಲ್ಕು ಕಾರುಗಳನ್ನು ಅಜಾಗರೂಕತೆಯಿಂದ ಚಲಾಯಿಸಿದ ವೈರಲ್ ವೀಡಿಯೊದ ಬಗ್ಗೆ ಮಾಹಿತಿ ನೀಡಲಾಗಿತ್ತು.

ಪೊಲೀಸರು ಪರಿಶೀಲನೆ ನಡೆಸಿದ ಬಳಿಕ ಮೂಡಬೆಟ್ಟು-ಮೂಳೂರು ನಡುವೆ ನಾಲ್ವರು ಆರೋಪಿಗಳಿಂದ ಸ್ಟಂಟ್ಸ್ ನಡೆದಿರುವುದು ದೃಢಪಟ್ಟಿದೆ. ಅದರಂತೆ ಪೊಲೀಸರು ವಾಹನಗಳನ್ನು ವಶಪಡಿಸಿಕೊಂಡು ನಾಲ್ವರನ್ನು ಬಂಧಿಸಿದ್ದಾರೆ.

ಜಾಲತಾಣಗಳಲ್ಲಿ ವೈರಲ್ ಆಗಿರುವ ವೀಡಿಯೋ 29 ಸೆಕೆಂಡ್‌ಗಳಷ್ಟಿದ್ದು, ನಾಲ್ಕು ಕಾರುಗಳ ಚಾಲಕರು ಪರಸ್ಪರರ ರೇಸಿಂಗ್ ನಲ್ಲಿ ತೊಡಗಿದ್ದರು.

## ಶಾಸಕ ಹರೀಶ್ ಪೂಂಜಾ ವಿರುದ್ಧ ಬೆಳ್ತಂಗಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲು

■ ವಿಜಯಸಾಕ್ಷಿ ಸುದ್ದಿ, ಬೆಳ್ತಂಗಡಿ

ಮುಖ್ಯಮಂತ್ರಿ ಸಿದ್ದರಾಮಯ್ಯ ಬಿಜೆಪಿ ಕಾರ್ಯಕರ್ತರ ಹತ್ಯೆ ಮಾಡಿದ್ದಾರೆ ಎಂಬ ವಿವಾದಾತ್ಮಕ ಹೇಳಿಕೆ ವಿರುದ್ಧ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ನಮಿತ ನೀಡಿರುವ ದೂರಿನಂತೆ ಶಾಸಕ ಹರೀಶ್ ಪೂಂಜಾ ವಿರುದ್ಧ ಬೆಳ್ತಂಗಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ.

ಶಾಸಕ ಹರೀಶ್ ಪೂಂಜಾ ಮೇ 22ರಂದು ಬೆಳ್ತಂಗಡಿಯ ಕಿನ್ಯಮ್ಮ ಯಾನೆ ಗುಣವತಿ ಅಮ್ಮ ಸಭಾಂಗಣದಲ್ಲಿ ಬಿಜೆಪಿ ವತಿಯಿಂದ ನಡೆದ ಕಾರ್ಯಕ್ರಮದ ಭಾಷಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 24 ಹಿಂದುಗಳ ಕೊಲೆ ಮಾಡಿದವರೆಂದು ಅವರ ಪರವಾಗಿ ಸತ್ಯಜಿತ್ ಸುರತ್ಕಲ್ ಮತಯಾಚನೆ ಮಾಡಿದರು ಎಂದು ವಿವಾದಾತ್ಮಕ ಹೇಳಿಕೆ ನೀಡಿದ್ದರು.

### ನಿತ್ಯ ನರಕಯಾತನೆ ಅನುಭವಿಸುತ್ತಿರುವ ಜನ

# ಮಾರಕವಾಗಿ ಪರಿಣಮಿಸಿದ ಲಂಡಿಹಳ್ಳ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಜನವಸತಿ ಪ್ರದೇಶದಲ್ಲಿ ಹರಿದಿರುವ ಲಂಡಿಹಳ್ಳದ ಗಲೀಜು ನೀರು, ಆಳೆತ್ತರ ಬೆಳೆದು ನಿಲ್ಲುವ ಗಿಡಗಂಟೆ, ಕಸ ಮತ್ತು ಇಲ್ಲಿ ಹರಿದಾಡುವ ವಿಷಜಂತುಗಳ ಕಾಟದಿಂದ ಸುತ್ತಲಿನ ಜನರು ನಿತ್ಯ ನರಕ ಯಾತನೆ ಅನುಭವಿಸುತ್ತಿದ್ದಾರೆ.

ಪಟ್ಟಣದ ಯಲಿಗಾರ ಪ್ಲಾಟ್, ಜನ್ನತ್‌ನಗರ, ಹಳ್ಳದಕೇರಿ, ಕೆಂಚಲಾಪುರ, ಬಳಿಗಾರ ಓಣಿಯಲ್ಲಿ ಹಳ್ಳದಗುಂಟ ಹರಿಯುವ ಗಲೀಜು ನೀರು, ಬೆಳೆದಿರುವ ಗಿಡಗಂಟೆಗಳು, ಆಳೆತ್ತರದ ಆಪಿನಂತಹ ಕಸದಿಂದ ರೋಗರುಜಿನಗಳ ತಾಣವಾಗಿದೆ. ಅಂಬೇಡ್ಕರ ನಗರ, ಇಂದಿರಾನಗರ, ಬಸವೇಶ್ವರ ನಗರವಷ್ಟೇ ಅಲ್ಲದೇ ಮಂಜಲಾಪುರ, ಅಡರಕಟ್ಟಿ ಗ್ರಾಮಕ್ಕೂ ಈ ಹಳ್ಳ ಮಾರಕವಾಗಿ ಪರಿಣಮಿಸಿದೆ. ಅಡರಕಟ್ಟಿ ಗ್ರಾಮದ ನೂರಾರು ಎಕರೆ ಪ್ರದೇಶ ಹಳ್ಳದ ಗಲೀಜು ನೀರಿನಿಂದ ಶಾಶ್ವತ ಜವುಳಾಗಿದೆ. ಈ ಸಮಸ್ಯೆ ನಿವಾರಣೆಗೆ ಏನೆಲ್ಲ ಹೋರಾಟ, ಮನವಿ ಮಾಡಿದರೂ ಪ್ರಯೋಜನವಾಗುತ್ತಿಲ್ಲ ಎಂಬುದು ಜನರ ಆರೋಪವಾಗಿದೆ.



ಪಟ್ಟಣದ ಅನೇಕ ವಾರ್ಡುಗಳಿಂದ ಹರಿದು ಬರುವ ಗಲೀಜು ನೀರು ಹಳ್ಳದಲ್ಲಿ ಸಂಗ್ರಹವಾಗಿ ಈ ಹಳ್ಳ ವಿಷಜಂತುಗಳಿಂದ ಕೂಡಿದೆ ಮತ್ತು ರೋಗ ರುಜಿನಗಳಿಗೆ ಕಾರಣವಾಗಿದೆ. ಹಳ್ಳದ ಅಕ್ಕಪಕ್ಕದ ಜನರೂ ಸಹ ಹಳ್ಳದಲ್ಲಿ ತ್ಯಾಜ್ಯ ತಂದು ಹಾಕುತ್ತಾರೆ. ಇದರಿಂದ ಲಕ್ಷ್ಮೇಶ್ವರ-ಗದಗ, ಲಕ್ಷ್ಮೇಶ್ವರ-ಮಂಜಲಾಪುರ ಮಾರ್ಗದಲ್ಲಿ ಹಾದು ಹೋಗಿರುವ ಈ ಹಳ್ಳದುದ್ದಕ್ಕೂ ಮತ್ತು ಸೇತುವೆ ಹತ್ತಿರ ಅಪಾರ ಪ್ರಮಾಣದ ತ್ಯಾಜ್ಯ ಸಂಗ್ರಹಗೊಂಡು ಗಬ್ಬು ನಾರುತ್ತಿದೆ. ಇದು ಮಳೆಗಾಲದಲ್ಲಿ ರೈತರ ಜಮೀನು ದಾಟಿ ತುಂಗಭದ್ರಾ ನದಿ ಸೇರುತ್ತದೆ. ಮಳೆಗಾಲ ಪೂರ್ವದಲ್ಲಿ ಹಳ್ಳ ಸ್ವಚ್ಛಗೊಳಿಸಬೇಕು ಎಂಬುದು ಸಾರ್ವಜನಿಕರ ಒತ್ತಾಸೆಯಾಗಿದೆ.

> ಲಂಡಿಹಳ್ಳದ ಅಕ್ಕಪಕ್ಕದ ಹಳ್ಳದಕೇರಿ, ಕೆಂಚಲಾಪುರ, ಆಸಾರ ಓಣಿ, ಬಳಿಗಾರ ಓಣಿಯ ಜನರು ನಿತ್ಯ ಸೊಳ್ಳೆ ಕಡಿತ, ಗಬ್ಬು ವಾಸನೆಯಿಂದ ಹಲವಾರು ರೋಗಗಳಿಗೆ ತುತ್ತಾಗಿದ್ದಾರೆ. ದಯವಿಟ್ಟು ಹಳ್ಳವನ್ನು ಸ್ವಚ್ಛಗೊಳಿಸಿ ಹಳ್ಳದ ಎರಡೂ ಬದಿಗೆ ಕಲ್ಲಿನ ತಡೆಗೋಡೆ ನಿರ್ಮಿಸಿ ಸ್ವಚ್ಛತೆ ಕಾಪಾಡುವ ಕೆಲಸ ಮಾಡಬೇಕು. ಪುರಸಭೆಗೆ ಇದು ಸವಾಲಾಗಿದ್ದರೂ ಮೂರು ತಿಂಗಳಿಗೊಮ್ಮೆಯಾದರೂ ಸ್ವಚ್ಛಗೊಳಿಸುವ ಕಾರ್ಯ ನಡೆಯಬೇಕು.
>
> **-ರಾಜು ಅಂದಲಗಿ, ರಾಘು ಕರೆತ್ತಿನ, ಗಂಗಾಧರ ಅಂಕಲಿ,** ರೈತರು.

> ಲಂಡಿನಾಲಾದ ಸ್ವಚ್ಛತೆ ಬಗ್ಗೆ ಈಗಾಗಲೇ ಹಿರಿಯ ಅಧಿಕಾರಿಗಳ ಗಮನಕ್ಕೆ ತರಲಾಗಿದೆ. ಕಳೆದ ವರ್ಷ ಹಳ್ಳದ ಸ್ವಚ್ಛತೆಗಾಗಿ ಜಿಲ್ಲೆಯ ಪಟ್ಟಣ ಪಂಚಾಯತ, ಪುರಸಭೆಯ ಜೆಸಿಬಿ ತರಿಸಿ 8/10 ದಿನಗಳ ಕಾಲ ಸಂಪೂರ್ಣ ಹಳ್ಳದ ಸ್ವಚ್ಛಪಡಿಸಲಾಗಿತ್ತು. ಹಳ್ಳದ ದಂಡೆಗೆ ಹಾಕಿದ್ದ ತಿಪ್ಪೆ, ಕಟ್ಟಿಗೆ, ಬಣವೆಯನ್ನು ತೆರವುಗೊಳಿಸಿ ಈ ವೇಳೆ ಸಾರ್ವಜನಿಕರಿಗೆ ಹಳ್ಳದಲ್ಲಿ ಕಸ ಹಾಕದಂತೆ ತಿಳಿವಳಿಕೆ ನೀಡಲಾಗಿತ್ತು. ಈ ವರ್ಷವೂ ಎರಡ್ಮೂರು ದಿನಗಳಲ್ಲಿ ಹಳ್ಳದ ಸ್ವಚ್ಛತೆಗೆ ಕ್ರಮ ಕೈಗೊಳ್ಳಲಾಗುವುದು.
>
> **-ಶಂಕರ ಹುಲ್ಲಮ್ಮನವರ,** ಪುರಸಭೆ ಮುಖ್ಯಾಧಿಕಾರಿ, ಲಕ್ಷ್ಮೇಶ್ವರ

### 'ಪರಿಸರಕ್ಕೆ ಪೂರಕವಾದ ಜೀವನ ಶೈಲಿಗೆ ಸಾಮೂಹಿಕ ಪ್ರೋತ್ಸಾಹ' ಕಾರ್ಯಕ್ರಮದಲ್ಲಿ ಶೋಭಾ ಪೋಳ ಅಭಿಮತ

## ಜಲಮೂಲಗಳನ್ನು ಮಲಿನಗೊಳಿಸದೇ ರಕ್ಷಿಸಬೇಕು

■ ವಿಜಯಸಾಕ್ಷಿ ಸುದ್ದಿ, ಗದಗ

ಪರಿಸರದಲ್ಲಿ ಪ್ರತಿಯೊಂದು ಜೀವಿಗಳಿಗೂ ತನ್ನದೇ ಆದ ಬದುಕು ಕಟ್ಟಿಕೊಳ್ಳುವ ಉದ್ದೇಶ ಇರುತ್ತದೆ. ಪ್ರತಿಯೊಬ್ಬ ಪ್ರಜೆಯೂ ಸಹ ಪರಿಸರ ಸಂರಕ್ಷಣೆಯಲ್ಲಿ ಪಾಲ್ಗೊಳ್ಳಬೇಕು. ಆಸ್ಪತ್ರೆಗಳಿಂದ ಉತ್ಪತ್ತಿಯಾಗುವ ತ್ಯಾಜ್ಯವನ್ನು ತಮ್ಮ ಆಸ್ಪತ್ರೆಯಲ್ಲಿಯೇ ಬೇರ್ಪಡಿಸಿ ವಿವಿಧ ಬಣ್ಣಗಳಿಂದ ಕೂಡಿದ ಡಸ್ಟ್‌ಬಿನ್‌ಗಳಲ್ಲಿ ಹಾಕುವುದರಿಂದ ವಿಲೇವಾರಿ ಘಟಕದ ಸಿಬ್ಬಂದಿಗಳಿಗೆ ಅನುಕೂಲವಾಗುತ್ತದೆ. ಗಿಡಮರಗಳನ್ನು ನಾವೆಲ್ಲರೂ ಪೋಷಿಸಿ ಬೆಳೆಸಬೇಕು. ಜಲಮೂಲಗಳನ್ನು ಮಲಿನಗೊಳಿಸದೇ ರಕ್ಷಿಸಬೇಕು ಎಂದು ಪರಿಸರ ಅಧಿಕಾರಿ ಶೋಭಾ ಪೋಳ ತಿಳಿಸಿದರು.



ಗದಗ ಜಿಲ್ಲಾಡಳಿತ, ಪ್ರಾದೇಶಿಕ ಕಛೇರಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಗದಗ ಹಾಗೂ ಮೆ. ಸಿಎಸ್‌ಆಯ್ ಬಾಸೆಲ್ ಮಿಶನ್ ಆಸ್ಪತ್ರೆ, ಗದಗ ಇವರುಗಳ ಸಂಯುಕ್ತ ಆಶ್ರಯದಲ್ಲಿ ಮೆ. ಸಿಎಸ್‌ಐ ಬಾಸೆಲ್ ಮಿಶನ್ ಆಸ್ಪತ್ರೆಯಲ್ಲಿ ಆಸ್ಪತ್ರೆಯ ಅಧಿಕಾರಿ ಹಾಗೂ ನರ್ಸಿಂಗ್ ಸಿಬ್ಬಂದಿಗಳಿಗೆ ಹಮ್ಮಿಕೊಂಡಿದ್ದ 'ಪರಿಸರಕ್ಕೆ ಪೂರಕವಾದ ಜೀವನ ಶೈಲಿಗೆ ಸಾಮೂಹಿಕ ಪ್ರೋತ್ಸಾಹ' ಎಂಬ ವಿಷಯದ ಕುರಿತು ತಿಳುವಳಿಕೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ ಎಲ್ಲಾ ಅಧಿಕಾರಿಗಳು/ನರ್ಸಿಂಗ್ ಸಿಬ್ಬಂದಿಗಳು ಹಾಗೂ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಪ್ರಾದೇಶಿಕ ಕಛೇರಿಯ ಪರಿಸರ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು 'ಪರಿಸರ ಸಂರಕ್ಷಣೆ ಕುರಿತು, ಪರಿಸರವನ್ನು ರಕ್ಷಿಸಲು ದೈನಂದಿನ ಜೀವನದಲ್ಲಿ ಸಾಧ್ಯವಿರುವ ಎಲ್ಲಾ ಬದಲಾವಣೆಗಳನ್ನು ಮಾಡುತ್ತೇವೆ' ಎಂದು ಪ್ರತಿಜ್ಞೆ ಮಾಡಿದರು. ನೀರಿನ ಮಿತ ಬಳಕೆ, ಇಂಧನ ಉಳಿತಾಯ, ಸುಸ್ಥಿರ ಆಹಾರ ಪದ್ಧತಿ ಅಳವಡಿಕೆ, ಆರೋಗ್ಯಯುತ ಜೀವನ ಶೈಲಿ ಅಳವಡಿಕೆ, ಏಕ ಬಳಕೆ ಪ್ಲಾಸ್ಟಿಕ್ ವಸ್ತುಗಳ ನಿಷೇಧ ಕುರಿತು ಕಾರ್ಯಕ್ರಮದಲ್ಲಿ ಚರ್ಚಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಡಾ. ಅಜಯರಾಜ್ ವಹಿಸಿದ್ದರು. ಲೆಕ್ಕಾಧಿಕಾರಿ ಲೀನಾಲಂಕಾ ಉಪಸ್ಥಿತರಿದ್ದರು. ಸುನಿಲ ವಂದಿಸಿದರು.

## ಜೆಡಿಎಸ್ ರಾಜ್ಯಾಧ್ಯಕ್ಷ ಸ್ಥಾನಕ್ಕೆ ಸಿ ಎಂ ಇಬ್ರಾಹಿಂ ರಾಜೀನಾಮೆ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

2023ರ ಕರ್ನಾಟಕ ವಿಧಾನಸಭೆ ಚುನಾವಣೆಯಲ್ಲಿ ಅತ್ಯಂತ ಹೀನಾಯ ಪ್ರದರ್ಶನ ನೀಡಿದ ನಂತರ ಜೆಡಿಎಸ್ ರಾಜ್ಯಾಧ್ಯಕ್ಷ ಸ್ಥಾನಕ್ಕೆ ಸಿ ಎಂ ಇಬ್ರಾಹಿಂ ರಾಜೀನಾಮೆ ನೀಡಿದ್ದಾರೆ. ತಮ್ಮ ರಾಜೀನಾಮೆ ಪತ್ರವನ್ನು ಜೆಡಿಎಸ್ ರಾಷ್ಟ್ರೀಯ ಅಧ್ಯಕ್ಷ ಹಾಗೂ ಮಾಜಿ ಪ್ರಧಾನಿ ಎಚ್ ಡಿ ದೇವೇಗೌಡ ಅವರಿಗೆ ಸಲ್ಲಿಸಿದ್ದಾರೆ.



ರಾಜೀನಾಮೆ ಪತ್ರವನ್ನು ದೇವೇಗೌಡರು ಇನ್ನೂ ಅಂಗೀಕರಿಸಿಲ್ಲ. ರಾಜೀನಾಮೆ ನೀಡಿದ ಬಳಿಕ ದೇವೇಗೌಡರ ನಿವಾಸದೆದುರು ಮಾತನಾಡಿದ ಸಿ ಎಂ ಇಬ್ರಾಹಿಂ, 'ಚುನಾವಣೆಯಲ್ಲಿ ಜೆಡಿಎಸ್ ಪಕ್ಷದ ಸೋಲಿನ ಹೊಣೆಯನ್ನು ನಾನೆ ಹೊರುತ್ತೇನೆ. ಹೀಗಾಗಿ ನೈತಿಕ ಹೊಣೆ ಹೊತ್ತು ದೇವೇಗೌಡರಿಗೆ ರಾಜೀನಾಮೆ ನೀಡಿದ್ದೇನೆ.' ಎಂದು ಹೇಳಿದರು.

ಹೊಸ ಸರ್ಕಾರ ಅಸ್ತಿತ್ವಕ್ಕೆ ಬಂದಿದೆ, ಅವರಿಗೆ ಶುಭವಾಗಲಿ. ರಾಜ್ಯದಲ್ಲಿ ಬಿಜೆಪಿ ಆಡಳಿತ ವಿರೋಧಿ ಅಲೆ ಇತ್ತು. ಇದನ್ನು ಕಾಂಗ್ರೆಸ್‌ನವರು ಹಣಬಲ ಸೇರಿದಂತೆ ಬೇರೆ ಬೇರೆ ವಿಚಾರದಲ್ಲಿ ಗೆದ್ದಿದ್ದಾರೆ. ನಮ್ಮದು ಪ್ರಾದೇಶಿಕ ಪಕ್ಷ, ಹಣ ಇಲ್ಲ. ನಮಗೆ ಯಾರ ಬೆಂಬಲವೂ ಇರಲಿಲ್ಲ. ಆದರೂ ನಾವು 60 ಲಕ್ಷ ಮತ ಪಡೆದಿದ್ದೇವೆ ಎಂದರು.

## ಶಿವಪ್ಪ ಮುಳಗುಂದ ದಂಪತಿಗಳಿಗೆ ಸನ್ಮಾನ



■ ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ಗದಗ-ಬೆಟಗೇರಿ ನಗರಸಭೆಯ ಮಾಜಿ ಅಧ್ಯಕ್ಷರಾದ ಶಿವಪ್ಪ ಮತ್ತು ನಾಗರತ್ನ ಶಿವಪ್ಪ ಮುಳಗುಂದ ಅವರ 40ನೇ ವಿವಾಹ ವಾರ್ಷಿಕ ಮಹೋತ್ಸವದ ಹಿನ್ನೆಲೆಯಲ್ಲಿ ಮಂಗಳವಾರ ಅವರ ಅಭಿಮಾನಿಗಳು ಮುಳಗುಂದ ದಂಪತಿಗಳನ್ನು ಸನ್ಮಾನಿಸಿ, ಗೌರವಿಸಿದರು.

ಈ ಸಂದರ್ಭದಲ್ಲಿ ಸಾಮಾಜಿಕ ಕಾರ್ಯಕರ್ತ ಬೂದಪ್ಪ ಹುಣಶೀಮರದ ಮಾತನಾಡಿ, ಅವಳಿ ನಗರದಲ್ಲಿ ಬದಲಾದ ರಾಜಕೀಯ ಪರಿಸ್ಥಿತಿಯಲ್ಲಿ ಶಿವಪ್ಪ ಮತ್ತು ಶ್ರೀಮತಿ ನಾಗರತ್ನ ಶಿವಪ್ಪ ಮುಳಗುಂದರು ತಲಾ 3 ವರ್ಷಗಳ ನಗರಾಡಳಿತವನ್ನು ಯಶಸ್ವಿಯಾಗಿ ನಿರ್ವಹಿಸಿ ನಗರದ ಪ್ರಗತಿಗೆ ಅವಿರತವಾಗಿ ಶ್ರಮಿಸಿದ್ದಾರೆ. ರಾಜ್ಯದ ರಾಜಕೀಯ ಇತಿಹಾಸದಲ್ಲಿ ದಲಿತ ದಂಪತಿಗಳು ಗದಗ ಬೆಟಗೇರಿ ನಗರಸಭೆಯನ್ನು 6 ವರ್ಷಗಳ ಕಾಲ ಆಳುವ ಮೂಲಕ ದಲಿತರು ಮತ್ತು ಶೋಷಿತರು ಆಳುವ ವರ್ಗವಾಗಬೇಕೆಂಬ ಸಂವಿಧಾನ ಶಿಲ್ಪಿ ಡಾ. ಅಂಬೇಡ್ಕರವರು ಕಂಡ ಕನಸನ್ನು ಈಡೇರಿಸುವ ಮೂಲಕ ರಾಜಕೀಯ ರಂಗದಲ್ಲಿ ಹೊಸ ಇತಿಹಾಸವನ್ನು ನಿರ್ಮಿಸಿದ್ದಾರೆ ಎಂದರು.

ಮೋಚಿಗಾರ ಸಮಾಜದ ಯುವ ನಾಯಕ ಅಶೋಕ ಮುಳಗುಂದ ಮಾತನಾಡಿ, ಶಿವಪ್ಪ ಮುಳಗುಂದ ದಂಪತಿಗಳು ನಗರಸಭಾ ಸದಸ್ಯರಾಗಿ, ಸ್ಥಾಯಿ ಸಮಿತಿ ಅಧ್ಯಕ್ಷರಾಗಿ, ವಿರೋಧ ಪಕ್ಷದ ನಾಯಕರಾಗಿ ಹಲವು ವರ್ಷಗಳ ಕಾಲ ಸಾರ್ವಜನಿಕ ಸೇವೆಯನ್ನು ಮಾಡಿ ಮಾದರಿಯಾಗಿದ್ದಾರೆ ಎಂದರು.

ಪತ್ರಕರ್ತ ಸುನೀಲಸಿಂಗ್ ಲದ್ದಿಗೇರಿ ಮಾತನಾಡಿ, ಸಾರ್ವಜನಿಕ ವಲಯದಲ್ಲಿ ತಮ್ಮ ಸೃಜನಾತ್ಮಕ ಕಾರ್ಯದ ಮೂಲಕ ಸಮಾಜದಲ್ಲಿ ಗುರುತಿಸಿಕೊಂಡ ಶಿವಪ್ಪ ಮತ್ತು ನಾಗರತ್ನ ಮುಳಗುಂದರು ನೂರಾರು ವರ್ಷ ಸುಖವಾಗಿ ಬಾಳಲಿ ಎಂದು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಲಕ್ಷ್ಮಣ ದೊಡ್ಡಮನಿ, ಲಕ್ಷ್ಮಣ ಮುಳಗುಂದ, ಅಣ್ಣಪ್ಪ ಗಾರವಾಡ, ಮಂಜುನಾಥ ಶಿವಪ್ಪ ಮುಳಗುಂದ, ಶಂಕರ ಮುಳಗುಂದ, ವರ್ಷಾ ಎಂ ಮುಳಗುಂದ, ಚಿದಾನಂದ ಹೊಸಮನಿ, ಮಲ್ಲೇಶಿ ಹುಲಕೋಟಿ ಸೇರಿದಂತೆ ಹಲವರಿದ್ದರು.

## ಬಜರಂಗದಳ, ಬಿಜೆಪಿ ಕಾರ್ಯಕರ್ತರ ಮೇಲೆ ಕ್ರಿಕೆಟ್ ಸ್ಟಂಪ್ಸ್‌ನಿಂದ ಹಲ್ಲೆ

■ ವಿಜಯಸಾಕ್ಷಿ ಸುದ್ದಿ, ಮಂಗಳೂರು

ದಕ್ಷಿಣ ಕನ್ನಡ ಜಿಲ್ಲೆ ಬಂಟ್ವಾಳ ತಾಲೂಕಿನ ಮಾಣಿ ಎಂಬಲ್ಲಿ ಬಜರಂಗದಳ ಮತ್ತು ಬಿಜೆಪಿ ಕಾರ್ಯಕರ್ತರ ಮೇಲೆ ಕ್ರಿಕೆಟ್ ಸ್ಟಂಪ್ಸ್‌ನಿಂದ ದಾಳಿ ನಡೆಸಿದ್ದಾರೆ. ಮಾಣಿಯಲ್ಲಿ ಬಜರಂಗದಳ ಮತ್ತು ಬಿಜೆಪಿ ಕಾರ್ಯಕರ್ತರ ಮೇಲೆ ಕಾಂಗ್ರೆಸ್ ಕಾರ್ಯಕರ್ತರ ತಂಡ ಕ್ರಿಕೆಟ್ ಸ್ಟಂಪ್ಸ್‌ನಿಂದ ಹಲ್ಲೆ ನಡೆಸಿದೆ ಎನ್ನುವ ಆರೋಪಗಳು ಕೇಳಿಬಂದಿವೆ. ವಿಧಾನಸಭೆ ಚುನಾವಣಾ ಫಲಿತಾಂಶದ ದಿನದ ಸಂಭ್ರಮಾಚರಣೆ ವೇಳೆ ನಡೆದಿದ್ದ ಗಲಾಟೆಗೆ ಇದು ಪ್ರತೀಕಾರ ಎನ್ನುವ ಶಂಕೆಯೂ ವ್ಯಕ್ತವಾಗಿದೆ.

ಪೆರಾಜೆ ಬಜರಂಗದಳ ಸಂಚಾಲಕ ಮಹೇಂದ್ರ ಹಾಗೂ ಬಿಜೆಪಿ ಕಾರ್ಯಕರ್ತ ಪ್ರಶಾಂತ್ ನಾಯ್ಕ್ ಎನ್ನುವವರು ದಾಳಿಗೆ ಒಳಗಾದವರಾಗಿದ್ದಾರೆ. ಹೀಗೆ ಕ್ರಿಕೆಟ್ ಸ್ಟಂಪ್ಸ್‌ನಿಂದ ದಾಳಿಗೆ ಒಳಗಾದ ಇಬ್ಬರು ಯುವಕರು ಪುತ್ತೂರು ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದಾರೆ ಎನ್ನುವ ಮಾಹಿತಿ ಲಭ್ಯವಾಗಿದೆ. ಭಜರಂಗದಳ ಸಂಚಾಲಕ ಮಹೇಂದ್ರ ಹಾಗೂ ಬಿಜೆಪಿ ಕಾರ್ಯಕರ್ತ ಪ್ರಶಾಂತ್ ನಾಯ್ಕ್ ತೆರಳುತ್ತಿದ್ದ ದ್ವಿಚಕ್ರ ವಾಹನಕ್ಕೆ ಒಮ್ನಿ ಕಾರಿನಲ್ಲಿ ಬಂದ ತಂಡವೊಂದು ಡಿಕ್ಕಿ ಹೊಡೆದಿದೆ. ನಂತರ ಕಾರಿನಿಂದ ಇಳಿದು ಬಂದ ದುಷ್ಕರ್ಮಿಗಳು ಕ್ರಿಕೆಟ್ ಸ್ಟಂಪ್ಸ್‌ನಿಂದ ಮಾರಣಾಂತಿಕ ಹಲ್ಲೆ ನಡೆಸಿದ್ದಾರೆ ಎನ್ನಲಾಗಿದೆ. ಇನ್ನು ಹಲ್ಲೆಗೊಳಗಾದವರ ಕಾಲು ಮತ್ತು ತಲೆಯ ಭಾಗಕ್ಕೆ ಗಂಭೀರ ಗಾಯಗಳಾಗಿದ್ದು, ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ.

## ಗ್ರಾ ಪಂ ಕಾರ್ಯದರ್ಶಿ ಲೋಕಾಯುಕ್ತ ಬಲೆಗೆ

■ ವಿಜಯಸಾಕ್ಷಿ ಸುದ್ದಿ, ಮಂಡ್ಯ

ನಿವೇಶನದ ಖಾತೆ ಮಾಡಿಕೊಡುವ ವಿಷಯಕ್ಕೆ ಸಂಬಂಧಿಸಿದಂತೆ ಲಂಚದ ಬೇಡಿಕೆ ಇಟ್ಟು ಕಚೇರಿಯಲ್ಲಿ ಹಣ ಸ್ವೀಕರಿಸುತ್ತಿದ್ದ ವೇಳೆ ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಲೋಕಾಯುಕ್ತ ಬಲೆಗೆ ಬಿದ್ದಿರುವ ಘಟನೆ ಮಂಡ್ಯದಲ್ಲಿ ನಡೆದಿದೆ.

ಮಂಡ್ಯ ತಾಲೂಕಿನ ಬೇಲೂರು ಗ್ರಾಮ ಪಂಚಾಯಿತಿಯ ಕಾರ್ಯದರ್ಶಿ (ಗ್ರೇಡ್-1) ದಯಾನಂದ ಎಂಬಾತನೇ ಲೋಕಾಯುಕ್ತ ಬಲೆಗೆ ಬಿದ್ದ ಅಧಿಕಾರಿಯಾಗಿದ್ದಾರೆ. ಮಂಡ್ಯದ ಶ್ರೀರಾಮ ಬಡಾವಣೆಯಲ್ಲಿ ಮಂಜುನಾಥ್ ಎಂಬುವರು 30*40 ಅಳತೆಯ ನಿವೇಶನ ಖರೀದಿಸಿದ್ದರು. ಇದಕ್ಕೆ ಸಂಬಂಧಿಸಿದಂತೆ ತನ್ನ ಪತ್ನಿ ಹಾಗೂ ಅತ್ತೆಯವರ ಹೆಸರಿಗೆ ಜಂಟಿ ಖಾತೆ ಮಾಡಿಸಿಕೊಡುವಂತೆ ಗ್ರಾಮ ಪಂಚಾಯಿತಿಗೆ ಮನವಿ ಸಲ್ಲಿಸಿದ್ದರು.

ಖಾತೆ ಬದಲಾವಣೆಗೆ ಆರಂಭದಲ್ಲಿ ಕಾರ್ಯದರ್ಶಿ ದಯಾನಂದ 40 ಸಾವಿರ ರೂ.ಗಳಿಗೆ ಬೇಡಿಕೆ ಇಟ್ಟಿದ್ದರು. ಬಳಿಕ ಇಬ್ಬರ ನಡುವೆ ಒಪ್ಪಂದ ನಡೆದು 35 ಸಾವಿರ ರೂ.ಗಳಿಗೆ ಒಪ್ಪಿಕೊಂಡಿದ್ದರು ಎನ್ನಲಾಗಿದೆ. ಈ ಹಿನ್ನೆಲೆಯಲ್ಲಿ ದೂರುದಾರ ಮಂಜುನಾಥ್ ಅವರು 5 ಸಾವಿರ ರೂ.ಗಳೊಂದಿಗೆ ಗ್ರಾಮ ಪಂಚಾಯಿತಿ ಕಚೇರಿಗೆ ಆಗಮಿಸಿದ್ದರು. ಈ ಬಗ್ಗೆ ಮಾಹಿತಿ ಪಡೆದ ಲೋಕಾಯುಕ್ತ ಪೊಲೀಸರು ಆರೋಪಿ ದಯಾನಂದ 5 ಸಾವಿರ ರೂ. ಲಂಚ ಸ್ವೀಕರಿಸುತ್ತಿದ್ದ ವೇಳೆ ಮಧ್ಯಾಹ್ನ 12.30ರ ಸಮಯದಲ್ಲಿ ದಾಳಿ ನಡೆಸಿ ದಯಾನಂದನನ್ನು ವಶಕ್ಕೆ ಪಡೆದಿದ್ದಾರೆ.

## ವಿದ್ಯುತ್ ಬಿಲ್ ಪಾವತಿಸಲು ಗ್ರಾಹಕರ ಪರದಾಟ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಹೆಸ್ಕಾಂ ವಿದ್ಯುತ್ ಬಿಲ್‌ಅನ್ನು ಆನ್‌ಲೈನ್ ಪೇಮೆಂಟ್ ಆ್ಯಪ್‌ಗಳಿಂದ ಪಾವತಿಸುವ ವ್ಯವಸ್ಥೆ ಕೆಲ ದಿನಗಳಿಂದ ಸ್ಥಗಿತಗೊಂಡು ಸುಲಭವಾಗಿ ಬಿಲ್ ಮಾಡುವ ವ್ಯವಸ್ಥೆ ಸ್ಥಗಿತವಾಗಿದ್ದು, ಗ್ರಾಹಕರು ಪರದಾಡುವಂತಾಗಿದೆ. ಪೇಟಿಎಂ, ಫೋನ್‌ಪೇ, ಗೂಗಲ್ ಪೇ ಹಾಗೂ ವಿವಿಧ ಆನ್‌ಲೈನ್ ಪೇಮೆಂಟ್ ಆ್ಯಪ್‌ಗಳಿಂದ ಗ್ರಾಹಕರು ತಾವಿದ್ದ ಸ್ಥಳದಿಂದಲೇ ಕ್ಷಣಾರ್ಧದಲ್ಲಿ ವಿದ್ಯುತ್ ಬಿಲ್ ಪಾವತಿಸುತ್ತಿದ್ದರು. ಆದರೆ ಮೇ ತಿಂಗಳ ಆರಂಭದಿಂದ ಈ ಆ್ಯಪ್‌ಗಳಲ್ಲಿ ಬಿಲ್ ಪಾವತಿ ಸಾಧ್ಯವಾಗುತ್ತಿಲ್ಲ.




ಹುಬ್ಬಳ್ಳಿ-ಧಾರವಾಡದಲ್ಲಿ ವಿದ್ಯುತ್ ಬಿಲ್ ಪಾವತಿಸಲು ಹೆಚ್ಚು ಸಮಯ ಬೇಕಾಗುತ್ತದೆ. ಸರದಿ ಸಾಲಿನಲ್ಲಿ ನಿಂತುಕೊಂಡು ಬಿಲ್ ಪಾವತಿ ಮಾಡುವುದು ಸಾರ್ವಜನಿಕರ ದುಸ್ತರವಾಗಿದೆ. ಗ್ರಾಹಕರಿಗೆ ಅನುಕೂಲ ಕಲ್ಪಿಸುವ ದೃಷ್ಟಿಯಿಂದ ಆನ್‌ಲೈನ್ ಪೇಮೆಂಟ್ ಸಲುವಾಗಿ ಬರೋಡಾ ಜೊತೆಗೆ ಹೆಸ್ಕಾಂ ಕೆಲ ಅವಧಿಗೆ ಒಪ್ಪಂದ ಮಾಡಿಕೊಂಡಿತ್ತು. ಆದರೆ ಒಪ್ಪಂದದ ಅವಧಿ ಅಂತ್ಯಗೊಂಡಿದೆ. ಈ ನಿಟ್ಟಿನಲ್ಲಿ ಜನರು ಬಿಲ್ ಪಾವತಿ ಮಾಡಲು ಪರದಾಡುವಂತಾಗಿದೆ. ಹೀಗಾಗಿ ಹೆಸ್ಕಾಂ ಇಲಾಖೆಯವರು ಬಿಲ್ ಪಾವತಿಸಲು ಪ್ರತ್ಯೇಕ ವ್ಯವಸ್ಥೆ ಮಾಡಬೇಕು ಎನ್ನುವುದು ಸಾರ್ವಜನಿಕರ ಆಗ್ರಹವಾಗಿದೆ.

## ರಸ್ತೆ ಅಪಘಾತದಲ್ಲಿ ಎನ್‌ಎಸ್‌ಜಿ ಕಮಾಂಡೋ ಸಾವು

■ ವಿಜಯಸಾಕ್ಷಿ ಸುದ್ದಿ, ಚಿಕ್ಕಮಗಳೂರು

ರಸ್ತೆ ಅಪಘಾತದದಲ್ಲಿ ಎನ್‌ಎಸ್‌ಜಿ ಕಮಾಂಡೋ ಒಬ್ಬರು ಸಾವನ್ನಪ್ಪಿರುವ ಘಟನೆ ಬೆಂಗಳೂರಿನಲ್ಲಿ ನಡೆದಿದೆ. ಇತ್ತೀಚೆಗೆ ರಾಷ್ಟ್ರೀಯ ಭದ್ರತಾ ಪಡೆ ಬ್ಲ್ಯಾಕ್ ಕ್ಯಾಟ್ ವಿಭಾಗಕ್ಕೆ (ಎನ್‌ಎಸ್‌ಜಿ) ಕಮಾಂಡೋ ಆಗಿ ನೇಮಕವಾಗಿದ್ದ ಚಿಕ್ಕಮಗಳೂರಿನ ದೀಪಕ್(31) ಮೃತ ದುರ್ದೈವಿ ಎಂದು ಗುರುತಿಸಲಾಗಿದೆ. ದೀಪಕ್ ರಜೆ ಮುಗಿಸಿ ವಾಪಸ್ ಕೆಲಸಕ್ಕೆ ಹೋಗುವಾಗ ಬೆಂಗಳೂರಿನಲ್ಲಿ ಈ ಅಪಘಾತ ಸಂಭವಿಸಿದೆ.

ಮೃತ ಎನ್‌ಎಸ್‌ಜಿ ಕಮ್ಯಾಂಡೋ ದೀಪಕ್ ತರೀಕೆರೆ ತಾಲೂಕಿನ ತಣಿಗೇಬೈಲು ನಿವಾಸಿ ಆಗಿದ್ದರು. ಇತ್ತೀಚೆಗೆ ಎನ್‌ಎಸ್‌ಜಿ ಬ್ಲ್ಯಾಕ್ ಕ್ಯಾಟ್ ಕಮಾಂಡೋವಾಗಿ ನೇಮಕವಾಗಿದ್ದರು.



2020ರಲ್ಲಿ ಮದುವೆ ಯಾಗಿದ್ದ ದೀಪಕ್ ಮನೆಯಲ್ಲಿ ಕಾರ್ಯಕ್ರಮವಿದ್ದ ಹಿನ್ನೆಲೆಯಲ್ಲಿ ಒಂದು ತಿಂಗಳ ರಜೆಯನ್ನು ತೆಗೆದುಕೊಂಡು ತವರೂರಿಗೆ ಬಂದಿದ್ದರು. ರಜೆಯಲ್ಲಿದ್ದ ಸಂದರ್ಭದಲ್ಲಿ ದೀಪಕ್ ಹೊಸ ಬೈಕ್ ಅನ್ನು ಖರೀದಿ ಮಾಡಿದ್ದರು. ಈಗ ರಜೆ ಮುಕ್ತಾಯಗೊಂಡ ಹಿನ್ನೆಲೆಯಲ್ಲಿ ಕೆಲಸಕ್ಕೆ ಮರಳಿ ಹೋಗಬೇಕಿತ್ತು. ಆದ್ದರಿಂದ ಹೊಸ ಬೈಕ್‌ನಲ್ಲಿ ಚಿಕ್ಕಮಗಳೂರಿನಿಂದ ಬೆಂಗಳೂರಿಗೆ ತೆರಳುತ್ತಿದ್ದಾಗ ಈ ದುರ್ಘಟನೆ ಸಂಭವಿಸಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅಭಿಪ್ರಾಯ

# ರಾಷ್ಟ್ರೀಯ ಶಿಕ್ಷಣ ನೀತಿ ಜಾರಿಗೆ ಮೊದಲು ಕಾರ್ಯಾಗಾರ ಅವಶ್ಯಕ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ರಾಜ್ಯದಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಜಾರಿಗೊಳಿಸುವ ಮೊದಲು ಈ ಕುರಿತು ರಾಜ್ಯ ಮಟ್ಟದಿಂದ ತಾಲೂಕು ಮಟ್ಟದವರೆಗೆ ವಿಶೇಷ ತರಬೇತಿ ಕಾರ್ಯಾಗಾರ ನಡೆಸಬೇಕಿರುವುದು ಅತಿ ಅವಶ್ಯಕವಾಗಿದೆ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅಭಿಪ್ರಾಯಪಟ್ಟಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ರಾಜ್ಯದ ಶಿಕ್ಷಣ ಪರಿಸರವನ್ನು ಗಮನದಲ್ಲಿಟ್ಟುಕೊಂಡು, ರಾಷ್ಟ್ರೀಯ ಶಿಕ್ಷಣ ನೀತಿಯನ್ನು ರಾಜ್ಯದಲ್ಲಿ ಹೇಗೆ ಅನುಷ್ಠಾನಗೊಳಿಸಬೇಕು ಎಂಬುದರ ಬಗ್ಗೆ ವಿಸ್ತೃತ ಚರ್ಚೆಯಾಗಬೇಕು. ನಂತರ ಅದನ್ನು ರಾಜ್ಯದಲ್ಲಿ ಅರ್ಥಪೂರ್ಣವಾಗಿ ಅನುಷ್ಠಾನಗೊಳಿಸಲು ಅನುಕೂಲ ವಾಗುತ್ತದೆ ಎಂದು ಹೊರಟ್ಟಿ ಅಭಿಪ್ರಾಯಪಟ್ಟಿದ್ದಾರೆ.



ಕೇಂದ್ರವು ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಜಾರಿಗೊಳಿಸಲು ರಾಜ್ಯ ಸರಕಾರಗಳಿಗೆ ತಿಳಿಸಿದೆ. ಆದರೆ ಕರ್ನಾಟಕ ರಾಜ್ಯದಲ್ಲಿ ಅದಿನ್ನೂ ಅರ್ಥಪೂರ್ಣವಾಗಿ ಪ್ರಗತಿದಾಯಕವಾಗಿ ಜಾರಿಯಾಗಿಲ್ಲ. ಸಮಗ್ರ ಶಿಕ್ಷಣ ಮೌಲ್ಯಾಧಾರಿತವಾಗಿ ಜಾರಿಗೊಳ್ಳಲು ಸರಕಾರ ಯಾವುದೇ ಇರಲಿ, ಮುತುವರ್ಜಿಯಿಂದ ಕಾರ್ಯ ನಿರ್ವಹಿಸಬೇಕು. ಇದಕ್ಕೆ ಎಲ್ಲರೂ ಸಹಕಾರ ನೀಡಬೇಕು ಎಂದು ಹೊರಟ್ಟಿ ತಿಳಿಸಿದ್ದಾರೆ.

ಮೇಲ್ಮನೆ ಎಂಬುದು ಈ ಮೊದಲು ಚಿಂತಕರ ಚಾವಡಿಯಾಗಿತ್ತು. ಅಲ್ಲಿ ಅನೇಕ ಗಹನವಾದ ವಿಚಾರಗಳು ಚರ್ಚಿಸಲ್ಪಡುತ್ತಿದ್ದವು. ಆದರೆ ಈಗ ಹಾಗಾಗುತ್ತಿಲ್ಲ. ಈ ಸಾರೆಯ ವಿಧಾನ ಸಭೆಗೆ ಅನೇಕ ಯುವಕರು ಆಯ್ಕೆ ಆಗಿರುವುದು ಸಂತೋಷದ ಸಂಗತಿ. ಎಲ್ಲರೂ ಸೇರಿ ರಾಜ್ಯದ ಅಭಿವೃದ್ಧಿಗೆ ಚಿಂತಿಸಿ, ಶ್ರಮಿಸಬೇಕೆಂದು ಹೊರಟ್ಟಿ ತಿಳಿಸಿದ್ದಾರೆ.

ಹೊಸ ಸರಕಾರದ ರಚನೆಯಾಗಿದೆ. ಇನ್ನು ಮುಂದೆ ಅನೇಕ ಅಭಿವೃದ್ಧಿಪರ ಸಭೆಗಳು ನಡೆಯಲಿವೆ. ಹೊಸ ಸರಕಾರದ ಬಜೆಟ್ ಪ್ರಕ್ರಿಯೆಗಳೂ ಪ್ರಾರಂಭವಾಗಲಿವೆ. ಜನರ ನಿರೀಕ್ಷೆಯನ್ನು ಸಾಕಾರಗೊಳಿಸುವ ಕಾರ್ಯವನ್ನು ನೂತನ ಸರಕಾರ ಮಾಡಬೇಕಿದೆ. ಅದಕ್ಕಾಗಿ ಎಲ್ಲರೂ ಒಮ್ಮನದಿಂದ ರಾಜ್ಯದ ಅಭಿವೃದ್ಧಿಗೆ ದುಡಿಯಬೇಕಿದೆ ಎಂದು ಬಸವರಾಜ ಹೊರಟ್ಟಿ ಅಭಿಪ್ರಾಯಪಟ್ಟಿದ್ದಾರೆ.

'ಮಾತೋಶ್ರೀ ರತ್ನಮ್ಮ ಹೆಗ್ಗಡೆ ಮಹಿಳಾ ಗ್ರಂಥ ಬಹುಮಾನ'

# ಶ್ರೇಷ್ಠ ಮಹಿಳಾ ಕನ್ನಡ ಕೃತಿಗಳ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಕರ್ನಾಟಕ ವಿದ್ಯಾವರ್ಧಕ ಸಂಘವು 2022ನೇ ವರ್ಷದ ಶ್ರೇಷ್ಠ ಮಹಿಳಾ ಕನ್ನಡ ಕೃತಿಗಳಿಗೆ 'ಮಾತೋಶ್ರೀ ರತ್ನಮ್ಮ ಹೆಗ್ಗಡೆ ಮಹಿಳಾ ಗ್ರಂಥ ಬಹುಮಾನ' ಕೊಡಲು ನಿರ್ಧರಿಸಿದೆ. ಈ ಬಹುಮಾನಕ್ಕೆ ಮೂರು ಅತ್ಯುತ್ತಮ ಕೃತಿಗಳನ್ನು ಆಯ್ಕೆ ಮಾಡಲಾಗುವುದು. ಆಯ್ಕೆಯಾದ ಪ್ರತಿಯೊಂದು ಕೃತಿಗೆ ರೂ. 15,000 ಸಮಾನಾಂತರ ಬಹುಮಾನ ನೀಡಿ ಗೌರವಿಸಲಾಗುವುದು.

ಭಾಗವಹಿಸಲು ನಿಯಮಗಳು: ಈ ಬಹುಮಾನಕ್ಕೆ ಪುಸ್ತಕಗಳನ್ನು ಲೇಖಕಿಯರು ಮಾತ್ರ ಕಳಿಸಬೇಕು. ಕನ್ನಡ ಕೃತಿಗಳಿಗೆ ಮಾತ್ರ ಬಹುಮಾನಗಳನ್ನು ಕೊಡಲಾಗುವುದು. ಪ್ರಕಟಿತ ಮೂಲ ಕೃತಿಯಾಗಿರಬೇಕು. ಅನುವಾದದ ಕೃತಿಯಾಗಿರಬಾರದು. ಕೃತಿಯು 1-1-2022ರಿಂದ 31-12-2022ರ ನಡುವೆ ಪ್ರಕಟವಾಗಿರಬೇಕು. ಯಾವುದೇ ವಿಶ್ವವಿದ್ಯಾಲಯವು ಡಾಕ್ಟರೇಟ್ ನೀಡಿದ ಪ್ರಬಂಧಗಳಿಗೆ (ಪಿಎಚ್‌ಡಿ ಪ್ರಬಂಧ) ಅಥವಾ ಯಾವುದೇ ವಿಶ್ವವಿದ್ಯಾಲಯಕ್ಕೆ ಹಾಜರುಪಡಿಸಿದ, ತಿರಸ್ಕೃತವಾದ ಕೃತಿಗಳಿಗೆ ಹಾಗೂ ಎಂ.ಫಿಲ್ ಮಾಡಿ ಪ್ರಕಟಿಸಿದ ಕೃತಿಗಳಿಗೆ ಬಹುಮಾನ ನೀಡಲಾಗುವುದಿಲ್ಲ.

ಪ್ರತಿಯೊಂದು ಕೃತಿಯ 4 ಪ್ರತಿಗಳನ್ನು ಕಳಿಸಬೇಕು. ಒಬ್ಬರು ಒಂದಕ್ಕಿಂತ ಹೆಚ್ಚು ಕೃತಿಗಳನ್ನು ಕಳಿಸಬಹುದಾದರೂ ಅವರ ಒಂದು ಕೃತಿಗೆ ಮಾತ್ರ ಬಹುಮಾನ ಕೊಡಲಾಗುವುದು. ಲೇಖಕಿಯರು ತಮ್ಮ ಪರಿಚಯ ಹಾಗೂ ತಮ್ಮ ಗ್ರಂಥ ಕುರಿತು ಸಂಕ್ಷಿಪ್ತ ಮಾಹಿತಿಯನ್ನು ಸ್ವ ಹಸ್ತಾಕ್ಷರದಲ್ಲಿ ಬಿಳಿ ಹಾಳೆಯ ಮೇಲೆ ಬರೆದು ಭಾವಚಿತ್ರದೊಂದಿಗೆ ಮೊಬೈಲ್ ನಂಬರ್ ಸಮೇತ ಕಳಿಸಬೇಕು. ಪ್ರಕಾಶಕರು ಪುಸ್ತಕಗಳನ್ನು ಸಲ್ಲಿಸಿದರೂ ಬಹುಮಾನ ಬಂದಲ್ಲಿ ಅದನ್ನು ಲೇಖಕಿಯರಿಗೆ ಕೊಡಲಾಗುವುದು. ಕರ್ನಾಟಕ ವಿದ್ಯಾವರ್ಧಕ ಸಂಘದ ಕಚೇರಿ ವೇಳೆಯಲ್ಲಿ ಸ್ವತಃ ಬಂದು ಅಥವಾ ಅಂಚೆಯ ಮೂಲಕ ಪುಸ್ತಕಗಳನ್ನು ಸಲ್ಲಿಸಲು 2023 ಜೂನ್ 30 ಕೊನೆಯ ದಿನವಾಗಿರುತ್ತದೆ. ಬಹುಮಾನ ನೀಡುವಲ್ಲಿ ಸಂಘದ ನಿರ್ಣಯವೇ ಅಂತಿಮ. ಸಂಘದ ಕಾರ್ಯಕಾರಿ ಸಮಿತಿ ಸದಸ್ಯರು ಇದರಲ್ಲಿ ಪಾಲ್ಗೊಳ್ಳಲು ಅವಕಾಶವಿಲ್ಲ. ಈಗಾಗಲೇ ಈ ಬಹುಮಾನವನ್ನು ಎರಡು ಬಾರಿ ಪಡೆದುಕೊಂಡವರಿದ್ದರೆ ಅಂಥವರಿಗೆ ಭಾಗವಹಿಸಲು ಅವಕಾಶವಿರುವುದಿಲ್ಲ.

ಈ ವಿಷಯಕ್ಕೆ ಸಂಬಂಧಪಟ್ಟಂತೆ ಹೆಚ್ಚಿನ ವಿವರಗಳಿಗೆ ಪ್ರಧಾನ ಕಾರ್ಯದರ್ಶಿಗಳು, ಕರ್ನಾಟಕ ವಿದ್ಯಾವರ್ಧಕ ಸಂಘ, ಧಾರವಾಡ-580001 ಇವರನ್ನು (ಮೊ: 94480-22950) ಸಂಪರ್ಕಿಸಬಹುದು ಎಂದು ಸಂಘದ ಪ್ರಧಾನ ಕಾರ್ಯದರ್ಶಿ ಶಂಕರ ಹಲಗತ್ತಿ ಪ್ರಕಟಣೆಯಲ್ಲಿ ಕೋರಿದ್ದಾರೆ.

# ಸದ್ಯದಲ್ಲೇ 3 ನಿಮಿಷಕ್ಕೊಂದು ಮೆಟ್ರೊ ರೈಲು

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಮೆಟ್ರೋ ಹಸಿರು ಮತ್ತು ನೇರಳೆ ಲೈನ್ ನ ಇನ್ನು ಮುಂದೆ 3-3.5 ನಿಮಿಷಗಳಿಗೆ ಒಂದು ರೈಲು ಸಂಚರಿಸಲಿದ್ದು, ಕಾಯುವಿಕೆ ಕಡಿಮೆಯಾಗಲಿದೆ.

ಬಿಎಂಆರ್ ಸಿಎಲ್ ಗೆ ಬಹುನಿರೀಕ್ಷಿತ ಹೊಸ ರೈಲುಗಳ 36 ಹೊಸ ಸೆಟ್ ಗಳು ಹಂತ ಹಂತವಾಗಿ ಲಭ್ಯವಾಗಲಿದ್ದು, ಈ ಪ್ರಕ್ರಿಯೆ ಸದ್ಯದಲ್ಲೇ ಪೂರ್ಣಗೊಂಡು, ಕಾಯುವಿಕೆ ಅಂತರವೂ ಕಡಿಮೆಯಾಗಲಿದೆ.



ಕೋಲ್ಕತ್ತಾ ಮೂಲದ Titagarh Wagon Limited (TWL) ಚೀನೀ ಸಂಸ್ಥೆ ಅಖಿಲ ಕಾರ್ಪೊರೇಷನ್ ಲಿಮಿಟೆಡ್ ನೊಂದಿಗೆ ಪಾಲುದಾರಿಕೆ ಹೊಂದಿದ್ದು, ಶೇ.90 ರಷ್ಟನ್ನು ಪೂರೈಸುತ್ತದೆ ಹಾಗೂ ಅದರ ಅಂಗಸಂಸ್ಥೆಯು ಆರಂಭಿಕ ಒಪ್ಪಂದವನ್ನು ಪಡೆದುಕೊಂಡಿದೆ.

CRRC ಎರಡು ಮಾದರಿ ರೈಲು ಸೆಟ್‌ಗಳನ್ನು ಪೂರೈಸುತ್ತದೆ, ಇದನ್ನು ಪರೀಕ್ಷಾ ಉದ್ದೇಶಗಳಿಗಾಗಿ ಬಳಸಲಾಗುತ್ತದೆ. ಮೊದಲನೆಯದನ್ನು ಆಗಸ್ಟ್ ಅಂತ್ಯದ ವೇಳೆಗೆ ಅಥವಾ ಸೆಪ್ಟೆಂಬರ್ ಆರಂಭದಲ್ಲಿ ಲಭ್ಯವಾಗಲಿದೆ ಎಂದು ಮೂಲಗಳು ತಿಳಿಸಿವೆ. 216 ಕೋಚ್‌ಗಳ ಪೂರೈಕೆಗಾಗಿ 1,578 ಕೋಟಿ ರೂ.ಗಳ ಒಪ್ಪಂದಕ್ಕೆ ಡಿಸೆಂಬರ್ 2019 ರಲ್ಲಿ ಸಿಆರ್‌ಸಿಸಿ ಹಾಗೂ ಅದರ ಅಂಗಸಂಸ್ಥೆಯಾದ ನಾನ್‌ಜಿಂಗ್ ಪುಜೆನ್ ಕಂ. ಲಿಮಿಟೆಡ್‌ನೊಂದಿಗೆ ಸಹಿ ಹಾಕಲಾಗಿತ್ತು.

ಈ ಆರು ಕೋಚ್ ಸೆಟ್‌ಗಳಲ್ಲಿ ಇಪ್ಪತ್ತೊಂದು ಡಿಸ್ಟೆನ್ಸ್ ಟು ಗೋ (DTG) ಕೋಚ್‌ಗಳಾಗಿದ್ದು, ಇವುಗಳನ್ನು ಸರ್ಕ್ಯೂಟ್‌ಗಳ ಮೂಲಕ ಟ್ರ್ಯಾಕ್ ಮಾಡಬಹುದಾಗಿದೆ. ಇನ್ನು 15 ರೇಡಿಯೋ ಆಧಾರಿತ ಸಂವಹನವನ್ನು ಅವಲಂಬಿಸಿರುವ ಸಂವಹನ-ಆಧಾರಿತ ರೈಲು ನಿಯಂತ್ರಣ (CBTC) ಸೆಟ್‌ಗಳಾಗಿವೆ.

"ಸಿಆರ್‌ಆರ್‌ಸಿ ಪೂರೈಸುವ ಮೊದಲ ಮಾದರಿಯ ಆಖಿಲು ರೈಲು ಸೆಟ್ ನವೆಂಬರ್‌ನಲ್ಲಿ ಪರೀಕ್ಷೆಗೊಳಪಡುತ್ತದೆ. ಉಳಿದವುಗಳನ್ನು ಮಾರ್ಚ್ 2024 ರ ನಂತರ TWL ಸಂಸ್ಥೆ ಒದಗಿಸುತ್ತದೆ. ಬೈಯ್ಯಪ್ಪನಹಳ್ಳಿ-ಕೆಂಗೇರಿ ನಡುವೆ ಪ್ರಯಾಣಿಕರು ಹೆಚ್ಚಿನ ಸಂಖ್ಯೆಯಲ್ಲಿ ಪ್ರಯಾಣಿಸುವ ಅವಧಿಯಲ್ಲಿ ಪ್ರತಿ 4.5 ನಿಮಿಷಕ್ಕೊಂದು ರೈಲು ನಿಲ್ದಾಣಕ್ಕೆ ಆಗಮಿಸುತ್ತಿದೆ, ಹಾಗೂ ಹಸಿರು ಲೈನ್ ನಲ್ಲಿ (ನಾಗಸಂದ್ರ-ರೇಷ್ಮೆ ಇನ್ಸಿಟ್ಯೂಟ್) ಮಾರ್ಗದಲ್ಲಿ ಪ್ರತಿ 5 ನಿಮಿಷಕ್ಕೆ ಒಂದು ರೈಲು ಸಂಚರಿಸುತ್ತಿದೆ.

ಮುಂಬರುವ ಕೋಚ್ ಗಳ ಮೂಲಕ ಹೆಚ್ಚಿನ ಕೋಚ್ ಗಳು ಬಂದಂತೆ, ಎರಡು ರೈಲುಗಳ ನಡುವಿನ ಸಮಯದ ಅಂತರವನ್ನು, ನೇರಳೆ ಮಾರ್ಗದಲ್ಲಿ 3 ನಿಮಿಷ ಹಾಗೂ ಹಸಿರು ಮಾರ್ಗದಲ್ಲಿ 3.5 ನಿಮಿಷಕ್ಕೆ ನಿಗದಿಪಡಿಸಲಾಗುತ್ತದೆ ಎಂದು ಮೆಟ್ರೋ ಸಂಸ್ಥೆಯ ಮೂಲಗಳು ತಿಳಿಸಿವೆ.

# ಮೈಸೂರು: 18 ಕೋಟಿ ರೂ. ಮೌಲ್ಯದ ಅಂಬರ್ ಗ್ರೀಸ್ ವಶ: ಮೂವರ ಬಂಧನ

■ವಿಜಯಸಾಕ್ಷಿ ಸುದ್ದಿ, ಮೈಸೂರು

18 ಕೋಟಿ ರೂ. ಮೌಲ್ಯದ ಅಂಬರ್ ಗ್ರೀಸ್ (ತಿಮಿಂಗಿಲ ವಾಂತಿ) ಮಾರಾಟ ಮಾಡಲು ಯತ್ನಿಸಿದ ಮೂವರನ್ನು ಎಚ್.ಡಿ.ಕೋಟೆ ಪೊಲೀಸರು ಬಂಧನಕ್ಕೊಳಪಡಿಸಿದ್ದಾರೆ.

ಕೇರಳದ ಇಬ್ಬರು ನಾವಿಕರು ಹಾಗೂ ಎಚ್.ಡಿ.ಕೋಟೆಯ ಓರ್ವ ಸೇರಿದಂತೆ ಮೂವರು ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ.

ಮೂವರು ಆರೋಪಿಗಳು ಕೇರಳದ ಸ್ಥಳೀಯ ಮೀನುಗಾರರಿಂದ ಆಂಬರ್ಗ್ರಿಸ್ ಅನ್ನು ಪಡೆದುಕೊಂಡಿದ್ದರು. ಬಳಿಕ ಅದನ್ನು ರಾಜ್ಯ ಗಡಿ ದಾಟಿ ಸಾಗಿಸುತ್ತಿದ್ದ ಸಂದರ್ಭದಲ್ಲಿ ಪೊಲೀಸರಿಗೆ ಸಿಕ್ಕಿಬಿದ್ದರು.

ಆರೋಪಿಗಳಿಂದ ವಶಪಡಿಸಿಕೊಂಡಿರುವ ವಸ್ತು ಅಂಬರ್ ಗ್ರೀಸ್ ಎಂದು ಅರಣ್ಯ ಇಲಾಖೆ ಅಧಿಕಾರಿಗಳು ಖಚಿತಪಡಿಸಿದ್ದು, ಅದರ ಮೌಲ್ಯ ಸುಮಾರು 18 ಕೋಟಿ ರೂ. ಎಂದು ಅಂದಾಜಿಸಿದ್ದಾರೆ. ಅಂತರಾಷ್ಟ್ರೀಯ ಮಾರುಕಟ್ಟೆಯಲ್ಲಿ ಇದರ ಪ್ರತಿ ಕೆಜಿಗೆ 1.5 ಕೋಟಿಯಿಂದ 1.8 ಕೋಟಿ ರೂ.ವರೆಗೆ ಮೌಲ್ಯವಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

3,10,000 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಗುರಿ * ಈಗಾಗಲೇ 13,500 ಮೆ.ಟನ್ ರಸಗೊಬ್ಬರಗಳ ದಾಸ್ತಾನು ಲಭ್ಯ

# ಜಿಲ್ಲೆಯಲ್ಲಿ ಮುಂಗಾರು ಹಂಗಾಮಿನ ಸಿದ್ಧತೆ ಆರಂಭ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯಲ್ಲಿ ಮುಂಗಾರು ಹಂಗಾಮಿಗೆ 3,10,000 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಗುರಿ ಹೊಂದಲಾಗಿದೆ. ಜಿಲ್ಲೆಯ ಪ್ರಮುಖ ಬೆಳೆಗಳಾದ ಹೆಸರು 1,25,000 ಹೆ, ಗೋವಿನಜೋಳ 1,05,000 ಹೆ, ಶೇಂಗಾ 32,500 ಹೆ, ಸೂರ್ಯಕಾಂತಿ 11,500 ಹೆ, ಹಾಗೂ ಹತ್ತಿ 24,000 ಹೆ. ಪ್ರದೇಶದಲ್ಲಿ ಬಿತ್ತನೆ ಗುರಿ ಹೊಂದಲಾಗಿದೆ ಎಂದು ಕೃಷಿ ಇಲಾಖೆಯ ಪ್ರಕಟನೆ ತಿಳಿಸಿದೆ.

ಕೃಷಿ ಇಲಾಖೆಯ ಬೀಜ ವಿತರಣೆ ಯೋಜನೆಯಡಿ ಸಣ್ಣ ಅತಿಸಣ್ಣ ರೈತರಿಗೆ ಅವರ ಹಿಡುವಳಿ ಅನ್ವಯ ಹಾಗೂ ದೊಡ್ಡ ರೈತರಿಗೆ ಗರಿಷ್ಠ 5 ಎಕರಿಗೆ ಸೀಮಿತವಾಗಿ ರಿಯಾಯಿತಿ ದರದಲ್ಲಿ ಬಿತ್ತನೆ ಬೀಜ ವಿತರಿಸಲಾಗುವುದು. ಬೀಜಗಳ ಕೊರತೆಯಾಗದಂತೆ ಜಿಲ್ಲೆಯ ರೈತ ಸಂಪರ್ಕ ಕೇಂದ್ರಗಳಲ್ಲಿ ವಿವಿಧ ಬೆಳೆಗಳ ಬಿತ್ತನೆ ಬೀಜದ ದಾಸ್ತಾನು ಪ್ರಗತಿಯಲ್ಲಿರುತ್ತದೆ. ಈಗಾಗಲೇ 13,500 ಮೆ.ಟನ್ ರಸಗೊಬ್ಬರಗಳ ದಾಸ್ತಾನು ಜಿಲ್ಲೆಯ ರಸಗೊಬ್ಬರ ಮಾರಾಟಗಾರರಲ್ಲಿ ಲಭ್ಯವಿರುತ್ತದೆ. ಪೂರ್ವಮುಂಗಾರು ಹಂಗಾಮಿನಲ್ಲಿ ಶೇ 42 ರಷ್ಟು ಮಳೆಯ ಕೊರತೆ ಕಂಡುಬಂದಿದ್ದು, ಹವಾಮಾನ ಇಲಾಖೆಯ ಮುನ್ಸೂಚನೆಯಂತೆ ಮುಂಗಾರು ಹಂಗಾಮಿನಲ್ಲಿ ಸಾಮಾನ್ಯ ಮಳೆ ಬರಲಿದೆ. ಜಿಲ್ಲೆಯಲ್ಲಿ ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳ ಯಾವುದೇ ಕೊರತೆಯಾಗದಂತೆ ಕ್ರಮ ಕೈಗೊಳ್ಳಲಾಗಿದೆ. ರೈತರು ಆತಂಕಗೊಳ್ಳಬಾರದಾಗಿ ತಿಳಿಸಿದೆ.

ಮುಂಗಾರು ಹಂಗಾಮಿನಲ್ಲಿ ವಿವಿಧ ಬೆಳೆಗಳಿಗೆ ಮೇಲ್ಗೊಬ್ಬರವಾಗಿ, ಅತಿವೃಷ್ಟಿ ಸಂದರ್ಭದಲ್ಲಿ ಬೆಳೆ ಹಳದಿ ಬಣ್ಣಕ್ಕೆ ತಿರುಗಿದಾಗ ಹಾಗೂ ಈರುಳ್ಳಿ ಬೆಳೆಯಲ್ಲಿ ಕಳೆನಾಶಕದೊಂದಿಗೆ ಮಿಶ್ರಣವಾಗಿ ಅತಿಯಾಗಿ ಯುರಿಯಾ ಬಳಸಲಾಗುತ್ತದೆ. ಈ ರೀತಿಯಾದಾಗ ಯುರಿಯಾ ರಸಗೊಬ್ಬರದ ಬೇಡಿಕೆ ಹೆಚ್ಚುತ್ತದೆ. ಈ ರೀತಿಯ ಅತಿಯಾದ ಬೇಡಿಕೆ ನೋಡಿಕೊಂಡು ಕಾಳಸಂತೆಕೋರರ ಹಾವಳಿ ಹಾಗೂ ಕೃತಕ ಅಭಾವ ಸೃಷ್ಟಿಸುವ ಪ್ರಕರಣಗಳು ಕಂಡುಬರುವ ಸಾಧ್ಯತೆ ಇರುತ್ತದೆ. ಆದ್ದರಿಂದ, ಶಿಫಾರಸ್ಸು ಮಾಡಲಾದ ಪ್ರಮಾಣದಲ್ಲಿ ಮಾತ್ರ ರಸಗೊಬ್ಬರಗಳನ್ನು ಬಳಸಲು ಕೋರಲಾಗಿದೆ. ಇಂಥದ್ದೇ ಕಂಪನಿಯ ಯುರಿಯಾ ಬೇಕು ಎನ್ನುವ ಕೂಗು ಕೂಡಾ ಸಾಮಾನ್ಯವಾಗಿ ಕೇಳಿಬರುತ್ತದೆ. ಯುರಿಯಾ ಉತ್ಪಾದಕ ಕಂಪನಿ ಯಾವುದೇ ಇದ್ದರೂ ಯುರಿಯಾ ರಸಗೊಬ್ಬರದ ಪೋಷಕಾಂಶಗಳ ಪ್ರಮಾಣದಲ್ಲಿ ಯಾವುದೇ ವ್ಯತ್ಯಾಸವಿಲ್ಲದಿರುವುದನ್ನು ರೈತರು ಮನಗಾಣಬಹುದಾಗಿದೆ.

ಹರಳು ರೂಪದ ಯುರಿಯಾ ಹಾಗೂ ಡಿಎಪಿ ಬದಲಾಗಿ ದ್ರವರೂಪದ ನ್ಯಾನೋ ಯುರಿಯಾ ಹಾಗೂ ನ್ಯಾನೋ ಡಿಎಪಿಯನ್ನು ಮೇಲ್ಗೊಬ್ಬರವಾಗಿ ಬಳಸಲು ರೈತರಿಗೆ ಕೋರಲಾಗಿದೆ. ಈ ನ್ಯಾನೋ ರಸಗೊಬ್ಬರಗಳನ್ನು ಸಿಂಪರಣೆ ರೂಪದಲ್ಲಿ ಬಳಸಲಾಗುವುದರಿಂದ ಪೋಷಕಾಂಶಗಳು ಕಡಿಮೆ ಸಮಯದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಬೆಳೆಗಳಿಗೆ ಲಭ್ಯವಾಗುತ್ತವೆ.

ಅತಿವೃಷ್ಟಿಯಿಂದಾಗಿ ಬೆಳೆಯ ಬೇರುಗಳಿಗೆ ಗಾಳಿಯಾಡದಾಗ ಬೆಳೆ ಹಳದಿಯಾಗುವುದು ಕಂಡುಬರುತ್ತದೆ. ಆದ್ದರಿಂದ, ಹಳದಿಯಾಗುವಿಕೆಗೆ ಕೇವಲ ಸಾರಜನಕದ ಕೊರತೆಯೇ ಮುಖ್ಯ ಕಾರಣವೆಂದು ಅತಿಯಾದ ಯುರಿಯಾ ಬಳಕೆಯು ವೈಜ್ಞಾನಿಕ ಕ್ರಮವಲ್ಲ. ಇಂತಹ ಸಂದರ್ಭಗಳಲ್ಲಿ ಹೊಲಗಳಲ್ಲಿ ನಿಂತ ನೀರನ್ನು ಬಸಿಗಾಲುವೆಗಳ ಮೂಲಕ ಸರಾಗವಾಗಿ ಹರಿದುಹೋಗುವಂತೆ ಕ್ರಮವಹಿಸುವುದು ಸೂಕ್ತವಾಗಿರುತ್ತದೆ ಎಂದು ಪ್ರಕಟನೆಯಲ್ಲಿ ಹೇಳಲಾಗಿದೆ.

ಸಾವಯವ ಕೃಷಿ ಪದ್ಧತಿ ಅಳವಡಿಸಿಕೊಂಡು ಕೃಷಿ ತ್ಯಾಜ್ಯಗಳ ಮರುಬಳಕೆ ಮಾಡಿಕೊಳ್ಳಲು ಕೋರಲಾಗಿದೆ.

ಇದರಿಂದ ಸಾರಜನಕಯುಕ್ತ ರಸಗೊಬ್ಬರಗಳ ಬಳಕೆ ಪ್ರಮಾಣವನ್ನು ತಗ್ಗಿಸಬಹುದಾಗಿರುವುದಲ್ಲದೇ ಮಣ್ಣಿನಲ್ಲಿರುವ ಸೂಕ್ಷ್ಮ ಪೋಷಕಾಂಶಗಳು ಬೆಳೆಗಳಿಗೆ ಸಿಗುವಂತಾಗಿ ಮಣ್ಣಿನ ಫಲವತ್ತತೆಯನ್ನೂ ಕಾಪಾಡಿಕೊಂಡಂತಾಗುತ್ತದೆ.

ರೈಜೋಬಿಯಂ, ಅಜಟೋಬ್ಯಾಕ್ಟರ್ ಹಾಗೂ ಅಝೋಸ್ಪಿರುಲ್ಲಂ ಜೈವಿಕ ಗೊಬ್ಬರಗಳಿಂದ ಬೀಜೋಪಚಾರ ಕೈಗೊಂಡು ಬಿತ್ತನೆ ಮಾಡಿದಲ್ಲಿ ಮಣ್ಣಿನಲ್ಲಿರುವ ಸಾರಜನಕವು ಬೆಳೆಗಳಿಗೆ ಹೆಚ್ಚಿನ ಪ್ರಮಾಣದಲ್ಲಿ ಲಭ್ಯವಾಗಲು ಸಾಧ್ಯವಾಗುತ್ತದೆ. ಅಲ್ಲದೇ, ಟ್ರೈಕೋಡರ್ಮಾದಿಂದ ಬೀಜೋಪಚಾರ ಮಾಡಿ ಬಿತ್ತನೆ ಮಾಡಿದಲ್ಲಿ ಶಿಲೀಂಧ್ರಗಳಿಂದ ಬರುವ ರೋಗಗಳ ಪ್ರಾಥಮಿಕ ಹತೋಟಿಗೆ ಸಹಕಾರಿಯಾಗುತ್ತದೆ ಎಂದು ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ ಜಿ. ಎಚ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಹೆಚ್ಚಿನ ಮಾಹಿತಿಗಾಗಿ ಉಪ ಕೃಷಿ ನಿರ್ದೇಶಕರು, ಗದಗ ಉಪ ವಿಭಾಗ - 8277931401 ; ಉಪ ಕೃಷಿ ನಿರ್ದೇಶಕರು ರೋಣ ಉಪ ವಿಭಾಗ 8277931402 ; ಸಹಾಯಕ ಕೃಷಿ ನಿರ್ದೇಶಕರು (ಜಾರಿದಳ) ಜಕ್ಕನಿ ಕಛೇರಿ ಗದಗ 8277931404; ಸಹಾಯಕ ಕೃಷಿ ನಿರ್ದೇಶಕರು, ಗದಗ 8277931410 ; ಸಹಾಯಕ ಕೃಷಿ ನಿರ್ದೇಶಕರು, ಮುಂಡರಗಿ 8277931130 ; ಸಹಾಯಕ ಕೃಷಿ ನಿರ್ದೇಶಕರು, ನರಗುಂದ 8277931454; ಸಹಾಯಕ ಕೃಷಿ ನಿರ್ದೇಶಕರು, ರೋಣ 8277931451 ; ಸಹಾಯಕ ಕೃಷಿ ನಿರ್ದೇಶಕರು ಶಿರಹಟ್ಟಿ 8277931461 ಈ ಮೇಲಿನ ದೂರವಾಣಿಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ ಜಿ. ಎಚ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರೈತ ಬಾಂಧವರು ಖಾಸಗಿ ವಿತರಕರಲ್ಲಿ ಬಿತ್ತನೆ ಬೀಜ ಹಾಗೂ ರಸಗೊಬ್ಬರ ಖರೀದಿಸುವಾಗ ಈ ಕೆಳಗಿನ ಅಂಶಗಳನ್ನು ಗಮನಿಸಬಹುದಾಗಿದೆ. ಪರವಾನಿಗೆಯನ್ನು ಪಡೆದ ಮಾರಾಟಗಾರರಿಂದ ಮಾತ್ರ ಪ್ರಮಾಣೀಕರಿಸಿದ ಬೀಜ ಹಾಗೂ ರಸಗೊಬ್ಬರ ಖರೀದಿಸಬೇಕು. ಬಿಡಿ ಬೀಜಗಳನ್ನು ಯಾವುದೇ ಕಾರಣಕ್ಕೂ ಖರೀದಿ ಮಾಡಬಾರದು. ಬೀಜೋತ್ಪಾದಕರ ವಿವರ, ತಳಿಯ ಹಾಗೂ ಮೊಳಕೆ ಪ್ರಮಾಣ ಪರಿಶೀಲಿಸಿಕೊಳ್ಳಬೇಕು. ರಸಗೊಬ್ಬರ ಚೀಲದ ತೂಕ ಮತ್ತು ಪೋಷಕಾಂಶಗಳ ಪ್ರಮಾಣದ ಮಾಹಿತಿ ತಿಳಿದುಕೊಳ್ಳಬೇಕು.ಉತ್ಪಾದನಾ ದಿನಾಂಕ ಮತ್ತು ನಿಗದಿತ ದರ ಪರಿಶೀಲಿಸಿಕೊಳ್ಳಬೇಕು. ಬಿತ್ತನೆ ಬೀಜ ಹಾಗೂ ರಸಗೊಬ್ಬರ ಖರೀದಿಸಿರುವ ಬಗ್ಗೆ ಕಡ್ಡಾಯವಾಗಿ ರಶೀದಿ ಪಡೆದು ಕಾಯ್ದಿರಿಸಬೇಕು. ಕಳಪೆ ರಸಗೊಬ್ಬರದಿಂದ ಅಥವಾ ತಳಿದೋಷದಿಂದ ಬೆಳೆ ವಿಫಲವಾದ ಸಂದರ್ಭಗಳಲ್ಲಿ ಹತ್ತಿರದ ರೈತ ಸಂಪರ್ಕ ಕೇಂದ್ರ ಅಥವಾ ಸಹಾಯಕ ಕೃಷಿ ನಿದೇಶಕರ ಕಚೇರಿಗೆ ಸಕಾಲದಲ್ಲಿ ಸೂಕ್ತ ದಾಖಲೆಗಳೊಂದಿಗೆ ಸಂಪರ್ಕಿಸಬೇಕು ಎಂದು ಸೂಚಿಸಲಾಗಿದೆ.

ಸಿಎಂ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್

# 'ಸಂವಿಧಾನ ಉಳಿಸಿ, ಬದಲಾವಣೆ ತರಲು ಪತ್ರಿಕೋದ್ಯಮದ ಪಾತ್ರ ಮಹತ್ವದ್ದು'

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಸಂವಿಧಾನವನ್ನು ಉಳಿಸಲು ಪತ್ರಿಕೋದ್ಯಮ ಮಹತ್ವದ ದಾರಿಯಾಗಿದ್ದು, ಸಮಾಜದಲ್ಲಿ ಜನಪರ ಬದಲಾವಣೆ ತರುವಲ್ಲಿ ಮಾಧ್ಯಮದ ಪಾತ್ರ ಬಹುಮುಖ್ಯ ಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಅಭಿಪ್ರಾಯಪಟ್ಟಿದ್ದಾರೆ.

ಬುಧವಾರ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘವು ನಗರದಲ್ಲಿ ಹಮ್ಮಿಕೊಂಡಿದ್ದ ಅಭಿನಂದನಾ ಸಮಾರಂಭದಲ್ಲಿ ಅಭಿನಂದನೆ ಸ್ವೀಕರಿಸಿ ಮಾತನಾಡಿದ ಅವರು, 'ಪತ್ರಿಕೋದ್ಯಮ ನನ್ನ ಉಸಿರು. ಅದರಿಂದ ಅನೇಕ ಮೌಲ್ಯಗಳನ್ನು ಕಲಿತಿದ್ದೇನೆ. ಹಾಗಾಗಿ ನನಗೆ ಪತ್ರಿಕೋದ್ಯಮದ ಘನತೆಯ ಬಗ್ಗೆ ಎಚ್ಚರ ಮತ್ತು ಪ್ರೀತಿಯಿದೆ' ಎಂದು ಹೇಳಿದರು.



'ಪತ್ರಕರ್ತರು ತಮ್ಮ ವೃತ್ತಿಕ್ಷೇತ್ರದಲ್ಲಿ ಭಾರೀ ಸವಾಲನ್ನು ಎದುರಿಸುತ್ತಿದ್ದಾರೆ. ಏನೇ ಆದರೂ ಸದಾ ವೃತ್ತಿಬದ್ಧತೆ ಮೆರೆದರೆ ಮಾತ್ರ ಉತ್ತಮ ಪತ್ರಕರ್ತರಾಗಲು ಸಾಧ್ಯ ಎಂದ ಕೆ.ವಿ.ಪ್ರಭಾಕರ್, ಪತ್ರಿಕೋದ್ಯಮ ವೃತ್ತಿಯಲ್ಲಿ ಉತ್ತಮ ಮಾರ್ಗದರ್ಶನ ದೊರೆತರೆ ಸ್ಥಾನಮಾನಗಳು ಪತ್ರಕರ್ತರನ್ನು ಹುಡುಕಿಕೊಂಡು ಬರುತ್ತದೆ. ಸಂವಿಧಾನದ ಆಶಯದ ಅನುಗುಣಕ್ಕೆ ಪತ್ರಕರ್ತರು ನಡೆದುಕೊಳ್ಳುವುದನ್ನು ಕಲಿಯಬೇಕು ಎಂದು ಹೇಳಿದರು.

ಕೆಯುಡಬ್ಲ್ಯೂಜೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಮಾತನಾಡಿ, 'ಪತ್ರಕರ್ತರಾಗಿ ಒಂದೊಂದೇ ಹೆಜ್ಜೆ ಇಟ್ಟುಕೊಂಡು ಪರಿಶ್ರಮದಿಂದ ಮೇಲೇರಿ ಬಂದ ಪ್ರಭಾಕರ್, ಸಂಯಮದ ನಡವಳಿಕೆಯಿಂದ ಎಲ್ಲರ ಪ್ರೀತಿ ವಿಶ್ವಾಸಕ್ಕೆ ಪಾತ್ರರಾಗಿದ್ದಾರೆ ಎಂದರು.

ಹಿರಿಯ ಪತ್ರಕರ್ತ ಜಿ.ಎನ್. ಮೋಹನ್ ಮಾತನಾಡಿ, ಅಧಿಕಾರದ ಹುದ್ದೆಯಲ್ಲಿದ್ದಾಗಲೂ ಪ್ರಭಾಕರ್ ಪತ್ರಕರ್ತರಾಗಿ ಉಳಿದಿದ್ದಾರೆ. ಅವರ ಪರಿಶ್ರಮ ಮತ್ತು ಸಮಚಿತ್ತದ ನಡೆ ಎತ್ತರಕ್ಕೆ ಬೆಳೆಸಿದೆ ಎಂದು ಹೇಳಿದರು.

ಹಿರಿಯ ಪತ್ರಕರ್ತ ಕಂ. ಕ.ಮೂರ್ತಿ, ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ, ಖಜಾಂಚಿ ವಾಸುದೇವ ಹೊಳ್ಳ, ಹಿರಿಯ ಪತ್ರಕರ್ತರಾದ ಗೋಪಿನಾಥ, ಚೆಲುವರಾಜು, ವೆಂಕಟಸಿಂಗ್, ಹರೀಶ್ ಡಿ.ಎಲ್., ರವಿನಾಕಲಗೂಡು, ಗಿರೀಶ್ ಕೋಟೆ, ಅರುಣಾ ಕುಣಿಗಲ್, ಗುರುರಾಜ ಹೂಗಾರ್, ಶಶಿಕಲಾ ಸೇರಿದಂತೆ ಹಲವರು ಇದ್ದರು.

# ರಾಜ್ಯದಲ್ಲಿರುವುದು ಸಿದ್ದರಾಮಯ್ಯ-ಡಿಕೆಶಿ ಸಮ್ಮಿಶ್ರ ಸರಕಾರ: ಆರ್. ಅಶೋಕ್

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷದ ಸರ್ಕಾರ ಇಲ್ಲ. ಇದು ಸಿದ್ದರಾಮಯ್ಯ ಮತ್ತು ಡಿಕೆ ಶಿವಕುಮಾರ್ ಅವರ ಸಮ್ಮಿಶ್ರ ಸರ್ಕಾರ. ಈ ಸಮ್ಮಿಶ್ರ ಸರ್ಕಾರ ಹೆಚ್ಚು ದಿನ ಇರಲ್ಲ ಎಂದು ಮಾಜಿ ಸಚಿವ ಆರ್ ಅಶೋಕ್ ಹೇಳಿದ್ದಾರೆ.



ಬುಧವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಅಂದರೆ ಗೂಂಡಾಗಿರಿ, ಗೂಂಡಾಗಿರಿ ಅಂದರೆ ಕಾಂಗ್ರೆಸ್ ಎನ್ನುವುದು ಮುಖ್ಯಮಂತ್ರಿ ಹಾಗೂ ಉಪ ಮುಖ್ಯಮಂತ್ರಿ, ಹಿರಿಯ ಪೊಲೀಸ್ ಅಧಿಕಾರಿಗಳೊಂದಿಗೆ ನಡೆಸಿದ ಸಭೆಯಲ್ಲಿ ಅವರಿಗೆ ಬೆದರಿಕೆ ಹಾಕುವ ಮೂಲಕ ಸಾಬೀತುಪಡಿಸಿದ್ದಾರೆ' ಎಂದು ಟೀಕಿಸಿದರು.

ಕಾಂಗ್ರೆಸ್ ನೈತಿಕ ಪೊಲೀಸ್ ಗಿರಿಯ ಮೇಲೆ ದಾಳಿ ನಡೆಸುವ ಮೂಲಕ ರಾಜ್ಯದಲ್ಲಿ ಗಲಭೆ ಸೃಷ್ಟಿಸಲು ಮುಂದಾಗಿದೆ. ಪೊಲೀಸ್ ಅಧಿಕಾರಿಗಳ ಸಭೆಯಲ್ಲೂ ಅವರಿಗೆ ಎಲ್ಲಿಲ್ಲದ ಬೆದರಿಕೆಯನ್ನು ಹಾಕಿದೆ ಎಂದು ದೂರಿದರು.

ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಮೊದಲ ಸಂಪುಟ ಸಭೆಯಲ್ಲೇ ಜನತೆಗೆ ನೀಡಿದ ಗ್ಯಾರಂಟಿಗಳನ್ನು ಈಡೇರಿಸುವುದಾಗಿ ಹೇಳಿತ್ತು. ಆದರೆ, ಅಡ್ಡಗೋಡೆ ಮೇಲೆ ದೀಪವಿಟ್ಟಂತೆ ಗ್ಯಾರಂಟಿಗಳಿಗೆ ಸರಕಾರ ಕೇವಲ ಅನುಮೋದನೆ ಮಾತ್ರ ನೀಡಿದೆ ಎಂದು ಆರ್. ಅಶೋಕ್ ಆರೋಪಿಸಿದರು.

# ಉದ್ಧವ್ ಠಾಕ್ರೆ ಬೆಂಬಲದ ಭರವಸೆ ನೀಡಿದ್ದಾರೆ:ಅರವಿಂದ್ ಕೇಜ್ರಿವಾಲ್

■ವಿಜಯಸಾಕ್ಷಿ ಸುದ್ದಿ, ಮುಂಬೈ

ದಿಲ್ಲಿಯ ಹಿರಿಯ ಅಧಿಕಾರಿಗಳ ವರ್ಗಾವಣೆ ಮತ್ತು ನಿಯೋಜನೆಗಳನ್ನು ನಿಯಂತ್ರಿಸುವ ಕೇಂದ್ರ ಸರಕಾರದ ವಿಶೇಷ ಆದೇಶವನ್ನು ತಡೆಗಟ್ಟಲು ಆಪ್‌ಗೆ ನೆರವಾಗುವುದಾಗಿ ಮಹಾರಾಷ್ಟ್ರದ ಮಾಜಿ ಮುಖ್ಯಮಂತ್ರಿ ಉದ್ಧವ ಠಾಕ್ರೆ ಭರವಸೆ ನೀಡಿದ್ದಾರೆ ಎಂದು ದಿಲ್ಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಬುಧವಾರ ತಿಳಿಸಿದರು.

ಉಭಯ ನಾಯಕರು ಠಾಕ್ರೆಯವರ ನಿವಾಸದಲ್ಲಿ ಭೇಟಿಯಾಗಿ ಚರ್ಚಿಸಿದರು. ಪಂಜಾಬ ಮುಖ್ಯಮಂತ್ರಿ ಭಗವಂತ ಮಾನ್, ಆಪ್‌ನ ರಾಜ್ಯಸಭಾ ಸದಸ್ಯರಾದ ಸಂಜಯ ಸಿಂಗ್ ಮತ್ತು ರಾಘವ ಛಡ್ಡಾ ಹಾಗೂ ದಿಲ್ಲಿ ಸಚಿವೆ ಅತಿಷಿ ಕೇಜ್ರಿವಾಲ್ ಜೊತೆಯಲ್ಲಿದ್ದರು.

'ಸಂಸತ್ತಿನಲ್ಲಿ ನಮ್ಮನ್ನು ಬೆಂಬಲಿಸುವುದಾಗಿ ಠಾಕ್ರೆ ನಮಗೆ ಭರವಸೆ ನೀಡಿದ್ದಾರೆ. ಸುಗ್ರೀವಾಜ್ಞೆಯ ಬದಲು ಮಂಡಿಸಲಾಗುವ ಮಸೂದೆ ಸಂಸತ್ತಿನಲ್ಲಿ ಅಂಗೀಕಾರಗೊಳ್ಳದಿದ್ದರೆ 2014ರಲ್ಲಿ ಮೋದಿ ಸರಕಾರವು ಅಧಿಕಾರಕ್ಕೆ ಮರಳುವುದಿಲ್ಲ' ಎಂದು ಕೇಜ್ರಿವಾಲ್ ಹೇಳಿದರು.

'ದೇಶ ಮತ್ತು ಪ್ರಜಾಪ್ರಭುತ್ವವನ್ನು ಉಳಿಸಲು ನಾವು ಒಂದಾಗಿದ್ದೇವೆ. ನಮ್ಮನ್ನು 'ಪ್ರತಿಪಕ್ಷಗಳು 'ಎಂದು ಕರೆಯಬಾರದು, ವಾಸ್ತವದಲ್ಲಿ ಅವರು (ಕೇಂದ್ರ) ಪ್ರಜಾಪ್ರಭುತ್ವ ಮತ್ತು ಸಂವಿಧಾನದ ವಿರುದ್ಧವಾಗಿರುವುದರಿಂದ ಅವರನ್ನು 'ಪ್ರತಿಪಕ್ಷ' ಎಂದು ಕರೆಯಬೇಕು ಎಂದು ನಾನು ಭಾವಿಸಿದ್ದೇನೆ' ಎಂದು ಠಾಕ್ರೆ ನುಡಿದರು.

# ಬಿಬಿಎಂಪಿಯಿಂದ ರಾಜಕಾಲುವೆ ಒತ್ತುವರಿ ತೆರವು ಕಾರ್ಯಾಚರಣೆ ಪುನರಾರಂಭ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಭಾನುವಾರ ಮತ್ತು ಸೋಮವಾರ ನಗರದಲ್ಲಿ ಸುರಿದ ಭಾರೀ ಮಳೆ ಮತ್ತು ಪ್ರವಾಹ ಪರಿಸ್ಥಿತಿಯಿಂದಾಗಿ ಅಪಾರ ಪ್ರಮಾಣದಲ್ಲಿ ನಷ್ಟ ಉಂಟಾಗಿದ್ದು, ವಿಧಾನಸಭೆ ಚುನಾವಣೆಯಿಂದಾಗಿ ಸ್ಥಗಿತಗೊಂಡಿದ್ದ ರಾಜ ಕಾಲುವೆ ಒತ್ತುವರಿ ತೆರವು ಕಾರ್ಯಾಚರಣೆಯನ್ನು ಬಿಬಿಎಂಪಿ ಪುನರಾರಂಭಿಸಿದೆ. ಒತ್ತುವರಿ ತೆರವಿಗೆ ಕಂದಾಯ ಇಲಾಖೆ ಈಗಾಗಲೇ 68 ಆದೇಶಗಳನ್ನು ಹೊರಡಿಸಿದೆ.

ಕೆಆರ್ ಪುರಂ ಮತ್ತು ಮಹದೇವಪುರ ಕ್ಷೇತ್ರಗಳಿಗೆ ಹೆಚ್ಚಿನ ಆದೇಶ ನೀಡಲಾಗಿದೆ ಎಂದು ಬಿಬಿಎಂಪಿ ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. "ನ್ಯಾಯಾಲಯದ ಪ್ರಕರಣಗಳಿಂದಾಗಿ ಅತಿಕ್ರಮಣ ತೆರವು ಕಾರ್ಯಾಚರಣೆಯಲ್ಲಿ ಏರುಪೇರು ಆಗುತ್ತಿದೆ. ಮತದಾರರು ವಿಳಾಸದಿಂದ ಸ್ಥಳಾಂತರಗೊಂಡು ಮತದಾನ ಗೊಂದಲಕ್ಕೆ ಕಾರಣವಾಗಬಹುದೆಂಬ ಕಾರಣಕ್ಕೆ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಅವರು ಏಪ್ರಿಲ್‌ನಲ್ಲಿ ಕಾರ್ಯಾಚರಣೆ ನಿಲ್ಲಿಸುವಂತೆ ಸೂಚನೆ ನೀಡಿದ್ದರು.

ಐಟಿಐ ಕಾರ್ಖಾನೆಯಿಂದ 80 ಕಾರ್ಮಿಕರ ವಜಾ ಪ್ರಕರಣ

# ಒಪ್ಪಂದಕ್ಕೆ ಬದ್ಧವಾಗಿರುವಂತೆ ಆಡಳಿತ ಮಂಡಳಿಗೆ ಹೈಕೋರ್ಟ್ ನಿರ್ದೇಶನ



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಐಟಿಐ ಕಾರ್ಖಾನೆಯಿಂದ ಕೆಲಸದಿಂದ ವಜಾಗೊಂಡಿದ್ದ 80 ಕಾರ್ಮಿಕರನ್ನು ಮರುನೇಮಕ ಮಾಡಿಕೊಳ್ಳುವ ವಿಚಾರದಲ್ಲಿ, ಐಟಿಐ ಲಿಮಿಟೆಡ್ ಆಡಳಿತ ಮಂಡಳಿಯು ಒಪ್ಪಂದಕ್ಕೆ ಬದ್ಧವಾಗಿರಬೇಕು ಎಂದು ಹೈಕೋರ್ಟ್ ನಿರ್ದೇಶಿಸಿದೆ ಎಂದು ಎಐಟಿಸಿಸಿಟಿಯು ತಿಳಿಸಿದೆ.

ಈ ಕುರಿತು ಆಲ್ ಇಂಡಿಯಾ ಸೆಂಟ್ರಲ್ ಕೌನ್ಸಿಲ್ ಆಫ್ ಟ್ರೇಡ್ ಯೂನಿಯನ್ಸ್(ಎಐಟಿಸಿಸಿಟಿಯು) ಪ್ರಕಟನೆಯನ್ನು ಹೊರಡಿಸಿದ್ದು, 2021ರ ಡಿಸೆಂಬರ್ 1ರಂದು ಐಟಿಐನ ಆಡಳಿತ ಮಂಡಳಿಯು 80 ಮಂದಿ ಕಾರ್ಮಿಕರನ್ನು ವಜಾ ಮಾಡಿತ್ತು. ಅಂದಿನಿಂದ ವಜಾಗೊಂಡ ಕಾರ್ಮಿಕರು ಕಾರ್ಖಾನೆಯ ಮುಂಬಾಗ ಪ್ರತಿಭಟನೆಯನ್ನು ನಡೆಸುತ್ತಿದ್ದರು.

ಕಾರ್ಮಿಕರನ್ನು ಹಂತಹಂತವಾಗಿ ನೇಮಕ ಮಾಡಿಕೊಳ್ಳುವಂತೆ ಆಡಳಿತ ಮಂಡಳಿಯು ಕಾರ್ಮಿಕರೊಂದಿಗೆ ಒಪ್ಪಂದವನ್ನು ಏರ್ಪಡಿಸಿಕೊಂಡಿತ್ತು. ಆದರೆ ಮಂಡಳಿಯು ಈ ಒಪ್ಪಂದಕ್ಕೆ ಬದ್ದವಾಗಿರಲಿಲ್ಲ. ಹಾಗಾಗಿ ಕಾರ್ಮಿಕರನ್ನು ಪುನಾಃ ನೇಮಿಸಿಕೊಳ್ಳುವಂತೆ ಸಂಘಟನೆಯು ಹೈಕೋರ್ಟ್‌ಗೆ ರಿಟ್ ಅರ್ಜಿಯನ್ನು ಸಲ್ಲಿಸಿತ್ತು. ಅರ್ಜಿಯನ್ನು ಪರಿಶೀಲಿಸಿ, ಒಪ್ಪಂದಕ್ಕೆ ಬದ್ದವಾಗಿರುವಂತೆ ಕೋರ್ಟ್ ನಿರ್ದೇಶಿಸಿದೆ ಎಂದು ಪ್ರಕಟನೆಯಲ್ಲಿ ತಿಳಿಸಲಾಗಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka